ವಿಜಯಪುರ | ಸಂಪುಟ 04 | ಸಂಚಿಕೆ 057 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ


Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com RNI NO: KARKAN/2023/86203 ಶನಿವಾರ, ಏಪ್ರಿಲ್, 18, 2026

ಘಟನೆ ನಡೆದ 10 ವರ್ಷಗಳ ನಂತರ ತೀರ್ಪು ಬಂದಿದೆ. ಅಂದಿನಿಂದ ಇಂದಿನವರೆಗೂ ಯೋಗೇಶ್ ಗೌಡರನ್ನು ನೆನಪಿಸಿಕೊಂಡೇ ಜೀವನ ಮಾಡುತ್ತಿದ್ದೇವೆ. ಮುಂದೆಯೋ ಹೀಗೆಯೇ ಜೀವನ ಮಾಡುತ್ತೇವೆ.



■ ಮಲ್ಲಮ್ಮ ಗೌಡ

## ಪ್ರೀತಿ-ಬಾಂಧವ್ಯದಿಂದ ಜೀವನ ಮಾಡಲು ಧಾರ್ಮಿಕ ಕಾರ್ಯಕ್ರಮಗಳು ಪೂರಕ



■ ಉದಯರಶ್ಮಿ ದಿನಪತ್ರಿಕೆ

### ಜೆಡಿಎಸ್ ಪಕ್ಷದ ರಾಜ್ಯ ಹಿರಿಯ ಉಪಾಧ್ಯಕ್ಷ ಸೋಮನಗೌಡ(ಅಪ್ಪುಗೌಡ) ಪಾಟೀಲ ಮನಗೂಳಿ ಅಭಿಮತ

ಬಸವನಬಾಗೇವಾಡಿ: ಜಗತ್ತಿನಲ್ಲಿ ಪ್ರೀತಿ-ವಿಶ್ವಾಸ ಬಹುಮುಖ್ಯವಾಗಿದೆ. ಪ್ರತಿಯೊಬ್ಬರೂ ಪ್ರೀತಿ-ವಿಶ್ವಾಸ ಬಾಂಧವ್ಯದಿಂದ ಜೀವನ ಮಾಡಲು ಧಾರ್ಮಿಕ ಕಾರ್ಯಕ್ರಮಗಳು ಪೂರಕವಾಗಿವೆ ಎಂದು ಜೆಡಿಎಸ್ ಪಕ್ಷದ ರಾಜ್ಯ ಹಿರಿಯ ಉಪಾಧ್ಯಕ್ಷ ಸೋಮನಗೌಡ(ಅಪ್ಪುಗೌಡ) ಪಾಟೀಲ ಮನಗೂಳಿ ಹೇಳಿದರು.

ತಾಲೂಕಿನ ಮನಗೂಳಿ ಪಟ್ಟಣದ ಭಜನಾ ಮಂಟಪದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಪಟ್ಟೇಕಂಥಿ ಹಿರೇಮಠದ ಬಾಲತಪಸ್ವಿ ಮಹಾಂತ ಶಿವಾಚಾರ್ಯ ಸ್ವಾಮೀಜಿಯವರ 77ನೇ ಜಾತ್ರಾ ಮಹೋತ್ಸವ, ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯವರ 25ನೇ ಸಂಸ್ಮರಣೋತ್ಸವ ಹಾಗೂ ಶ್ರೀಗುರು ಮಹಾಂತೇಶ್ವರ ಪ್ರಶಸ್ತಿ ಹಾಗೂ ಭೂ ಜನ ಆರೋಗ್ಯ ರಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ,ಗುರುರಕ್ಷೆ, ಧರ್ಮ ಜಾಗೃತಿ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದು ಪ್ರತಿಯೊಬ್ಬರಲ್ಲಿ ಪ್ರೀತಿ-ವಿಶ್ವಾಸ ಇಲ್ಲದಂತಾಗಿರುವದು ವಿಷಾದನೀಯ. ಇದನ್ನು ಉಳಿಸಿಕೊಳ್ಳುವದು ಬಹಳ ದೊಡ್ಡ ಶಕ್ತಿಯಾಗಿದೆ. ಇದನ್ನು ಪ್ರತಿಯೊಬ್ಬರೂ ಉಳಿಸಿಕೊಂಡು ಜೀವನ ಮಾಡುವ ಅಗತ್ಯವಿದೆ. ಮನಸ್ಸಿನಲ್ಲಿ ಒಂದು ಹೊರಗೊಂದು ವಿಚಾರವನ್ನು ಇಟ್ಟುಕೊಂಡು ಜೀವನ ಸಾಗಿಸುವದು ಸರಿಯಲ್ಲ. ಎಂದಿಗೂ ವೈಮನಸ್ಸು ಇರಬಾರದು. ಪ್ರತಿಯೊಂದು ಊರುಗಳಲ್ಲಿ ಎಲ್ಲ ಬಾಂಧವರು ಸಹಕಾರ, ಸಹಬಾಳ್ವೆ, ಪ್ರೀತಿ-ವಿಶ್ವಾಸದೊಂದಿಗೆ ಬದುಕು ಸಾಗಿಸುವಂತಾಗಬೇಕೆಂದರು.

ಸಾನಿಧ್ಯ ವಹಿಸಿದ್ದ ನಾಗಠಾಣದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ನಾಡಿನಲ್ಲಿ ಶಿವಾಚಾರ್ಯ ಪರಂಪರೆಗೆ ಸೇರಿದ ಸಹಸ್ರ ಮಠಗಳಿವೆ. ಇಂತಹ ಮಠಗಳಲ್ಲಿ ಮನಗೂಳಿಯಲ್ಲಿರುವ ಪಟ್ಟೇಕಂಥಿ ಹಿರೇಮಠವು ತಪೋಭೂಷಣ, ತಪಸ್ವಿಮಠವಾಗಿದೆ. ಪ್ರಸ್ತುತ ಶ್ರೀಗಳು ಅನೇಕ ಸಾಮಾಜಿಕ, ಶೈಕ್ಷಣಿಕ ಕಾರ್ಯಗಳನ್ನು ಮಾಡುತ್ತಿದ್ದಾರೆ ಎಂದರು.

ನೇತೃತ್ವ ವಹಿಸಿದ್ದ ಪಟ್ಟೇಕಂಥಿ ಹಿರೇಮಠದ ಡಾ.ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಇಂದು ರಾಸಾಯನಿಕ ಬಳಕೆಯಿಂದಾಗಿ ಭೂಮಿಯ ಆರೋಗ್ಯ ಕೆಟ್ಟು ಹೋಗಿದೆ. ಕೆಟ್ಟು ಹೋದ ಭೂಮಿಯಿಂದ ಬರುವ ಆಹಾರದಿಂದ ಜನರ ಆರೋಗ್ಯವು ಕೆಡುತ್ತಿದೆ. ಇದನ್ನು ಮನಗಂಡು ನಾವು ಸಾವಯವ ಕೃಷಿ ಮಾಡುವ ಕೃಷಿಕರನ್ನು ಉತ್ತೇಜನ ಮಾಡುವ ಸಲುವಾಗಿ ಭೂ ಜನ ಆರೋಗ್ಯ ರಕ್ಷಕ ಪ್ರಶಸ್ತಿ ಎಂಬ ವಿನೂತನವಾಗಿ ಶ್ರೀಮಠ ನೀಡಿದೆ. ಭೂಮಿಯ ಆರೋಗ್ಯ ಸರಿಯಿದ್ದರೆ ಜನರ ಆರೋಗ್ಯವು ಸರಿಯಾಗಿರುತ್ತದೆ ಎಂದರು.

ಜಿಪಂ ಮಾಜಿ ಅಧ್ಯಕ್ಷ ಚಂದ್ರಶೇಖರಗೌಡ ಪಾಟೀಲ, ಮುಖ್ಯಮಂತ್ರಿ ಪದಕ ಪುರಸ್ಕೃತ ಪಿಎಸ್ಐ ಶ್ರೀಕಾಂತ ಕಾಂಬಳೆ ಮಾತನಾಡಿದರು. ಸಾನಿಧ್ಯವನ್ನು ಕೆರೂರಿನ ಡಾ.ಶಿವಕುಮಾರ ಶಿವಾಚಾರ್ಯ ಸ್ವಾಮೀಜಿ, ಇಂಗಳೇಶ್ವರದ ಭೃಂಗೀಶ್ವರ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದರು.

ಸಮಾರಂಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ವಿಶ್ವನಾಥಗೌಡ ಪಾಟೀಲ, ಪಟ್ಟಣ ಪಂಚಾಯಿತಿ ಹಂಗಾಮಿ ಅಧ್ಯಕ್ಷ ಶೇಖಪ್ಪಗೌಡ ಬಿರಾದಾರ, ಮುಖಂಡರಾದ ಸುಭಾಸಗೌಡ ಪಾಟೀಲ, ರಾಜಶೇಖರ ಮಗಿಮಠ, ಗುರು ಗಚ್ಚಿನಮಠ, ಎಸ್.ಎಸ್.ಗೊಳಸಂಗಿಮಠ, ಪಪಂ ಸದಸ್ಯರಾದ ಪ್ರದೀಪ ಜಾನಕರ, ಭಾಗ್ಯರಾಜ ಸೊನ್ನದ, ಪಪಂ ಮುಖ್ಯಾಧಿಕಾರಿ ನಿಖಿಲೇಶ ಪಾಟೀಲ ಇತರರು ಇದ್ದರು. ಸಂಗಮೇಶ ಗೆಣ್ಣೂರ ಸ್ವಾಗತಿಸಿದರು. ಎಸ್.ಪಿ.ಪಾಟೀಲ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ರತ್ನಾಬಾಯಿ ಸಿದ್ದಪ್ಪ ಗುಬ್ಬಾ ದಂಪತಿಗಳಿಗೆ ಶ್ರೀಗುರು ಮಹಾಂತೇಶ್ವರ ಪ್ರಶಸ್ತಿ, ವಿರೇಶ ಗೂಡಲಮನಿ ಅವರಿಗೆ ಭೂ ಜನ ಆರೋಗ್ಯ ರಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಯಿತು. ಪ್ರತಿಭಾನ್ವಿತ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಗುರುರಕ್ಷೆ ನೀಡಲಾಯಿತು. ಶ್ರೀಮಠದ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗು, ಶಾಲಾ ಪರಿಕರಗಳನ್ನು ವಿತರಿಸಲಾಯಿತು. ಸಮಾರಂಭಕ್ಕೂ ಮುನ್ನ ಗುರು ಮಹಾಂತೇಶ್ವರರ ಹಾಗೂ ಗುರು ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯವರ ರಜತ ಮೂರ್ತಿಗಳ ಬೆಳ್ಳಿ ಅಡ್ಡಪಲ್ಲಕ್ಕಿ ಮಹೋತ್ಸವವು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕುಂಭಮೇಳ, ಸಕಲ ವಾದ್ಯ ವೈಭವದೊಂದಿಗೆ ಸಂಭ್ರಮದಿಂದ ಜರುಗಿತು. ನಂತರ ರಥೋತ್ಸವ, ಶ್ರೀಮಠದ ಪೂಜ್ಯರ ಸಿಂಹಾಸನಾರೋಹಣ ನೆರವೇರಿತು.

# ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಜೀವಾವಧಿ ಶಿಕ್ಷೆ!

### ಜಿಪಂ ಸದಸ್ಯ ಯೋಗೇಶ್ ಗೌಡ ಹತ್ಯೆ ಪ್ರಕರಣ | ಶಾಸಕ ಕುಲಕರ್ಣಿ ಸೇರಿ 16 ಮಂದಿಗೆ ಜೀವಾವಧಿ ಶಿಕ್ಷೆ | ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತೀರ್ಪು



ಬೆಂಗಳೂರು: ಧಾರವಾಡ ಬಿಜೆಪಿ ನಾಯಕ ಯೋಗೇಶ್ ಗೌಡ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತೀರ್ಪು ಪ್ರಕಟಿಸಿದ್ದು ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಜೀವಾವಾಧಿ ಶಿಕ್ಷೆ ನೀಡಿದೆ. ಇದೇ ಪ್ರಕರಣದಲ್ಲಿ 15 ಅಪರಾಧಿಗಳಿಗೂ ಜೀವಾವಾಧಿ ಶಿಕ್ಷೆ ವಿಧಿಸಿರುವ ಕೋರ್ಟ್ 19ನೇ ಅಪರಾಧಿ ಚೆನ್ನಕೇಶವ ಟಿಂಗರಿಕರ್ ಗೆ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ಕೋರ್ಟ್‌ನ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರು ಇಂದು ಮಹತ್ವದ ತೀರ್ಪು ಪ್ರಕಟಿಸಿದ್ದಾರೆ. ವಿನಯ್ ಕುಲಕರ್ಣಿ ಮತ್ತು ಇತರರಿಗೆ ಕ್ರಿಮಿನಲ್ ಪಿತೂರಿ ಮತ್ತು ಕೊಲೆ ಸೇರಿದಂತೆ ಐಪಿಸಿ ಸೆಕ್ಷನ್‌ಗಳ ಅಡಿಯಲ್ಲಿ ಶಿಕ್ಷೆ ವಿಧಿಸಿದ್ದಾರೆ. ಇದೇ ವೇಳೆ ಯೋಗೇಶ್ ಗೌಡ ಮಕ್ಕಳಿಗೆ ಪರಿಹಾರವಾಗಿ 16 ಲಕ್ಷ ರೂಪಾಯಿ ನೀಡುವಂತೆ ಕೋರ್ಟ್ ಸೂಚಿಸಿದೆ.

ವಿನಯ್ ಕುಲಕರ್ಣಿ ಕಳೆದ 3 ದಿನದಿಂದ ಒಂದೇ ಬಟ್ಟೆಯಲ್ಲಿದ್ದಾರೆ. ಬಟ್ಟೆ ಬದಲಿಸಲು ಅನುಮತಿ ನೀಡುವಂತೆ ಶಾಸಕರ ಪರ ವಕೀಲ ಸುನಿಲ್ ಮನವಿ ಮಾಡಿದ್ದರು. ಅಪರಾಧಿಗಳಿಗೆ ಬಟ್ಟೆ ಒದಗಿಸಲು ಜೈಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜೈಲು ಕೈಪಿಡಿಯಲ್ಲಿರುವಂತೆ ಬಟ್ಟೆ ಒದಗಿಸಲು ಜಡ್ಜ್ ಸೂಚನೆ ನೀಡಿದ್ದಾರೆ. ಇದರ ಜತೆಗೆ ಪ್ರತಿ ಸೆಕ್ಷನ್‌ಗೂ ಪ್ರತ್ಯೇಕವಾಗಿ ದಂಡ ವಿಧಿಸಲಾಗಿದೆ.

2016ರ ಜೂನ್ 15ರಂದು ಧಾರವಾಡದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಯೋಗೇಶ್ ಗೌಡ ಅವರನ್ನು ಸಪ್ತಾಪುರ ಬಡಾವಣೆಯ ಜಿಮ್‌ನಲ್ಲಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಧಾರವಾಡದ ಉಪನಗರ ಪೊಲೀಸರು ದೂರು ದಾಖಲಿಸಿಕೊಂಡು ತನಿಖೆಯನ್ನು ನಡೆಸಿದ್ದರು. ಆಸ್ತಿ ವಿವಾದದ ವಿಚಾರಕ್ಕಾಗಿ ಈ ಕೊಲೆ ನಡೆದಿದೆ ಎಂದು ಪೊಲೀಸರು ಆರು ಜನರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಆದರೆ, ಹತ್ಯೆಯಾದ ಯೋಗೇಶ್ ಗೌಡ ಕುಟುಂಬದ ಸದಸ್ಯರ ಒತ್ತಾಯದ ಮೇರೆಗೆ 2019ರಲ್ಲಿ ಈ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗಿತ್ತು. ಬಳಿಕ ಸಿಬಿಐ ತನಿಖೆಯಲ್ಲಿ ಇದು ರಾಜಕೀಯ ಪ್ರೇರಿತ ಕೊಲೆ ಎಂದು ಹೇಳಿತ್ತು. ಅಲ್ಲಿಂದ ಈ ಪ್ರಕರಣ ರಾಜಕೀಯ ತಿರುವು ಪಡೆದುಕೊಂಡಿತ್ತು.

ಈ ಕೊಲೆಯಲ್ಲಿ ಶಾಸಕ ವಿನಯ್ ಕುಲಕರ್ಣಿ ಕೈವಾಡವಿರುವ ಅನುಮಾನ ವ್ಯಕ್ತವಾಗಿತ್ತು. 2020ರ ನವೆಂಬರ್ 5ರಂದು ಸಿಬಿಐ ಅಧಿಕಾರಿಗಳು, ವಿನಯ್ ಕುಲಕರ್ಣಿ ಅವರನ್ನು ಬಂಧಿಸಿದ್ದರು. ಈ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಸೇರಿ ಒಟ್ಟು 21 ಮಂದಿ ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಟ್ಟಿ ಸಲ್ಲಿಸಿದ್ದರು. ಇದರ ನಂತರ ವಿನಯ್ ಕುಲಕರ್ಣಿ ಜಾಮೀನು ಪಡೆದು ಹೊರಗೆ ಬಂದಿದ್ದರು. ನಂತರದಲ್ಲಿ ಈ ಪ್ರಕರಣವನ್ನು ಜನಪ್ರತಿನಿಧಿ ಕೋರ್ಟ್‌ಗೆ ನೀಡಲಾಗಿತ್ತು. ಇದೀಗ ಈ ಅವರಿಗೆ ಶಿಕ್ಷೆಯನ್ನು ಘೋಷಣೆ ಮಾಡಿದೆ.

# ಯಾದಗಿರಿ: ಕಾರು-ಖಾಸಗಿ ಬಸ್ ಮುಖಾಮುಖಿ ಡಿಕ್ಕಿ, 6 ಮಂದಿ ಸಜೀವ ದಹನ

ಯಾದಗಿರಿ: ಜಿಲ್ಲೆಯ ಸುರಪುರ ತಾಲೂಕಿನ ದೇವಾಪುರ ಬಳಿ ಕಾರು ಹಾಗೂ ಖಾಸಗಿ ಬಸ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಕಾರಿನಲ್ಲಿದ್ದ ಆರು ಮಂದಿ ಸಜೀವ ದಹನವಾಗಿದ್ದಾರೆ.

ಕೃಷ್ಣ ನಾಯಕ್(52), ಅನಂತ ಕಲಾ ನಾಯಕ್ (45), ಶರಣಪ್ಪ (36), ನಿಸರ್ಗ ಶರಣಪ್ಪ (30) ಇವರ ಪುತ್ರ ಸಿದ್ಧಾರ್ಥ ಶರಣಪ್ಪ (3) ಮತ್ತು ಶಶಿಕಲಾ (30) ಮೃತರು.

ಮೃತ ಶರಣಪ್ಪ ದಂಪತಿಯ ಪುತ್ರಿಯರಾದ ಅದ್ವಿಕಾ (5) ಮತ್ತು ಶ್ರೀನಿಧಿ (1.5 ವರ್ಷ) ಪರಿಸ್ಥಿತಿ ಚಿಂತಾಜನಕವಾಗಿದೆ. ಇವರನ್ನು ಸ್ಥಳೀಯರು ರಕ್ಷಿಸಿ ಆಸ್ಪತ್ರೆಗೆ ಸ್ಥಳಾಂತರಿಸಿದ್ದಾರೆ.

ಪ್ರಾಥಮಿಕ ತನಿಖೆ ಮತ್ತು ಪ್ರತ್ಯಕ್ಷದರ್ಶಿಗಳ ಹೇಳಿಕೆಗಳ ಪ್ರಕಾರ, ಕಾರಿನ ಟೈರ್ ಸ್ಫೋಟಗೊಂಡಿದ್ದು, ಚಾಲಕನ ನಿಯಂತ್ರಣ ತಪ್ಪಿ ಖಾಸಗಿ ಬಸ್‌ಗೆ ಮುಖಾಮುಖಿ ಡಿಕ್ಕಿ ಹೊಡೆದಿದೆ. ಬಳಿಕ ಕಾರು ಬೆಂಕಿಗೆ ಆಹುತಿಯಾಗಿದ್ದು, ಅದರಲ್ಲಿ ಪ್ರಯಾಣಿಸುತ್ತಿದ್ದ ಆರು ಜನ ಸಾವನ್ನಪ್ಪಿದ್ದಾರೆ. ಮೃತರು ಹಾಗೂ ಗಾಯಾಳುಗಳು ಪರಸ್ಪರ ಸಂಬಂಧಿಕರು – ಪೃಥ್ವಿಕ್ ಶಂಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಯಾದಗಿರಿ

ಯಾದಗಿರಿಯಿಂದ ರಾಯಚೂರು ಕಡೆ ಹೊರಟಿದ್ದ ಕಾರು, ಬೆಂಗಳೂರಿನಿಂದ ಕಲಬುರಗಿ ಕಡೆ ಬರುತ್ತಿದ್ದ ಖಾಸಗಿ ಬಸ್ ಮುಖಾಮುಖಿ ಡಿಕ್ಕಿಯಾಗಿವೆ. ಬಸ್ಸಿನಲ್ಲಿದ್ದ 20 ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ. ಡಿಕ್ಕಿಯ ರಭಸಕ್ಕೆ ಬೆಂಕಿ ಹೊತ್ತಿಕೊಂಡಿದ್ದು ಕಾರು ಮತ್ತು ಬಸ್ ಸಂಪೂರ್ಣ ಸುಟ್ಟು ಕರಕಲಾಗಿವೆ. ಕಾರಿನಲ್ಲಿದ್ದ 8 ಪ್ರಯಾಣಿಕರ ಪೈಕಿ ಆರು ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

# ಡಾ.ಅಂಬೇಡ್ಕರ್ ತತ್ವದಾರ್ಶ ಮೈಗೂಡಿಸಿಕೊಳ್ಳಿ :ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಜಗತ್ತಿನಲ್ಲಿ ಬಹಳಷ್ಟು ಜನ ಜನ್ಮ ತಾಳುತ್ತಾರೆ. ಅದರಲ್ಲಿ ಬೆರಳಣಿಕೆಯಷ್ಟು ಜನ ಮಾತ್ರ ಮಹಾನ ಸಾಧಕಕರಾಗಿ ಹೊರಹೊಮ್ಮುತ್ತಾರೆ. ಆ ಸಾಲಿನಲ್ಲಿ ಬಾಬಾಸಾಹೇಬ್ ಅವರು ಒಬ್ಬರು. ಇವರ ಜಯಂತಿಯನ್ನು ಆಚರಣೆ ಮಾಡುವುದರ ಜೊತೆಗೆ ತತ್ವದಾರ್ಶಗಳನ್ನು ಮೈಗೂಡಿಸಿಕೊಂಡು ಬದುಕು ಸಾಗಿಸಬೇಕು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ಬಸ್ ಡಿಪೋದಲ್ಲಿ ಎಸ್‌ಸಿ/ಎಸ್‌ಟಿ ನೌಕರರ ಸಂಘದ ವತಿಯಿಂದ ಹಮ್ಮಿಕೊಂಡ ಡಾ.ಬಿ.ಆರ್. ಅಂಬೇಡ್ಕರ ಅವರ 135ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂವಿದಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ ಜಯಂತಿಯನ್ನು ಪಕ್ಷಾತೀತವಾಗಿ ಎಲ್ಲರೂ ಆಚರಣೆ ಮಾಡಿದ್ದು ಸ್ವಾಗತಾರ್ಹ. ಅವರ ಚಿಂತನೆಗಳು ಮುಂದಿನ ಯುವ ಪೀಳಿಗೆಗೆ ರವಾನೆ ಆಗಬೇಕಾದರೆ ಹೆಚ್ಚೆಚ್ಚು ಗ್ರಂಥಾಲಯಗಳು ತೆರೆಯುವ ಮೂಲಕ ಅವರ ತತ್ವಗಳನ್ನು ಬಿತ್ತಬೇಕಾಗಿದೆ ಎಂದರು.

ಈ ವೇಳೆ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ವೈ.ಸಿ.ಮಯೂರ ಮಾತನಾಡಿ, ಶೋಷಿತ ಸಮುದಾಯದಲ್ಲಿ ಜನಿಸಿ, ಸಮಾಜದಲ್ಲಿ ಆಳವಾಗಿ ಬೇರೂರಿದ್ದ ಅಸ್ಪ್ರಶ್ಯತೆಯ ವಿರುದ್ಧ ಬಹುದೊಡ್ಡ ಕ್ರಾಂತಿಕಾರಿ ಚಳುವಳಿ ಆರಂಭಿಸಿದ್ದಲ್ಲದೇ ಸಮಾಜದಲ್ಲಿನ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಒದಗಿಸಲು ಹಗಲು ರಾತ್ರಿ ಶ್ರಮಿಸಿ ಮನುಕುಲ ಒಂದೇ ಎಂಬ ಆಶಯದೊಂದಿಗೆ ವಿಶ್ವದ ಅತಿದೊಡ್ಡ ಸಂವಿಧಾನ ರಚನೆ ಮಾಡುವ ಮೂಲಕ ಸರ್ವ ಜನರ ಒಳಿತಿಗಾಗಿ ಜನಿಸಿದ ಮಹಾನ್ ಚೇತನ್ ಡಾ.ಬಾಬಾಸಾಹೇಬ ಅಂಬೇಡ್ಕರ. ಜಾತಿ, ಧರ್ಮಗಳಾಚೆ ಮಾನವ ಧರ್ಮ ನಿರ್ಮಿಸಬೇಕಾಗಿದೆ. ಶರಣರು, ಸಂತರು ಮತ್ತು ದಾರ್ಶನಿಕರ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಹೋಗಬೇಕು. ಆ ಮೂಲಕ ವರ್ಗರಹಿತ, ಜಾತಿ ರಹಿತ ಸಮಾಜ ಕಟ್ಟಲು ಸಾಧ್ಯ ಎಂದರು.

ವೇದಿಕೆಯ ಮೇಲೆ ಘಟಕ ವ್ಯವಸ್ಥಾಪಕ ಎಂ.ಆರ್.ಲಮಾಣಿ, ವಲಯ ಅರಣ್ಯಾಧಿಕಾರಿ ಇರ್ಶಾದ ನೇವಾರ, ಗೋಲಗೇರಿ ಗೊಲ್ಲಾಳೇಶ್ವರ ದೇವಸ್ಥಾನದ ಧರ್ಮದರ್ಶಿ ರವಿರಾಜ ದೇವರಮನಿ, ರುದ್ರಗೌಡ ಪಾಟೀಲ ಯಂಕಂಚಿ, ಲೆಕ್ಕಪತ್ರ ಮೇಲ್ವಿಚಾರಕ ಸಂತೋಷ ಹತ್ತರಕಿ, ಸಿಬ್ಬಂದಿ ಮೇಲ್ವಿಚಾರಕ ಆನಂದ ಬಡಿಗೇರ ಇದ್ದರು.

ಇದೇ ಸಂದರ್ಭದಲ್ಲಿ ಮಾಧ್ಯಮ ಸಲಹೆಗಾರ ಪಂಡಿತ ಯಂಪೂರೆ, ಶ್ರೀಧರ ಇಂಗಳೆ, ಮುತ್ತಪ್ಪ ತಳ್ಳೊಳ್ಳಿ, ಬಸವರಾಜ ದ್ಯಾಮಗೊಂಡ, ಶಿವಶರಣ ಹೊಸಮನಿ, ಪರಸುರಾಮ ದೊಡಮನಿ, ಬಾಬು ಬೀಳಗಿ, ರಾಜಶೇಖರ ಕೊಣ್ಣೂರ, ಜೈಬೀಮ ಪೂಜಾರಿ, ಮರಳಪ್ಪ ಕುದರಗೊಂಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಎಸ್ಸಿ/ಎಸ್ಟಿ ನೌಕರರ ಸಂಘದ ಅಧ್ಯಕ್ಷ ಸುರೇಶ ಹೊಸಮನಿ ಸ್ವಾಗತಿಸಿದರು. ಶ್ರೀಕಾಂತ ಮೆಟಗಾರ ನಿರೂಪಿಸಿದರು. ಕಾರ್ಯದರ್ಶಿ ರಾಘವೇಂದ್ರ ಜಾಬನವರ ವಂದಿಸಿದರು.

## ನಿವೃತ್ತ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ.ಚವ್ಹಾಣ ನಿಧನ

■ ಉದಯರಶ್ಮಿ ದಿನಪತ್ರಿಕೆ



**ವಿಜಯಪುರ:** ನಿವೃತ್ತ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ.ಚವ್ಹಾಣ (74) ಗುರುವಾರ ರಾತ್ರಿ ನಿಧನರಾಗಿದ್ದಾರೆ.

ವಿಜಯಪುರ ನಗರದ ಚಾಲುಕ್ಯ ನಗರದ ನಿವಾಸಿಯಾಗಿದ್ದ ಅವರು, ಪಿ.ಎಸ್.ಐ, ಸಿಪಿಐ, ಡಿವೈಎಸ್ಪಿ ಸೇರಿದಂತೆ ಹೆಚ್ಚುವರಿ ಎಸ್ಪಿಯಾಗಿ ಸೇವೆ ಸಲ್ಲಿಸಿದ್ದರು. ಬೆಂಗಳೂರು, ಹುಬ್ಬಳ್ಳಿ, ರೋಣ, ಅಥಣಿ, ಹೊಸಪೇಟೆ, ಬಾದಾಮಿ, ವಿಜಯಪುರ ನಗರ, ಗದಗ, ಮೈಸೂರು, ಹಾಸನ ಹಾಗೂ ದಾವಣಗೆರೆಯಲ್ಲಿ ಸೇವೆ ಸಲ್ಲಿಸಿದ್ದ ಅವರು, ಗುರುವಾರ ರಾತ್ರಿ ಹೃದಯಾಘಾತದಿಂದ ನಿಧನರಾಗಿದ್ದಾರೆ.

ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು- ಬಳಗವನ್ನು ಅಗಲಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿ ಡಿಜಿಪಿ ಅಲೋಕಕುಮಾರ ಸೇರಿದಂತೆ ನಾನಾ ಗಣ್ಯರು ಮೃತರ ಅಂತಿಮ ದರ್ಶನ ಪಡೆದು ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

ಮೃತರ ಅಂತ್ಯಕ್ರಿಯೆ ಶುಕ್ರವಾರ ಸಂಜೆ ಚಡಚಣ ತಾಲೂಕಿನ ಬರಡೋಲ ಗ್ರಾಮದ ಅವರ ತೋಟದಲ್ಲಿ ನಡೆಯಿತು.

## ಡಾ.ರಾಜ್ ಕುಮಾರ್ ಜನ್ಮದಿನಾಚರಣೆ ಪೂರ್ವಭಾವಿ ಸಭೆ ಇಂದು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಡಾ.ರಾಜ್‌ಕುಮಾರ್ ಅವರ ಜನ್ಮದಿನಾಚರಣೆಯನ್ನು ಇದೇ ಏಪ್ರಿಲ್ 24ರಂದು ಜಿಲ್ಲಾಡಳಿತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಹಯೋಗದಲ್ಲಿ ಆಚರಿಸುವ ಹಿನ್ನೆಲೆಯಲ್ಲಿ ಪೂರ್ವಭಾವಿ ಸಿದ್ದತಾ ಸಭೆಯನ್ನು ಅಪರ ಜಿಲ್ಲಾಧಿಕಾರಿಗಳು, ವಿಜಯಪುರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:18.04.2026 ರಂದು ಬೆಳಿಗ್ಗೆ 11:00 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಒಂದನೇ ಮಹಡಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಈ ಸಭೆಗೆ ಅಧಿಕಾರಿಗಳು, ಮುಖಂಡರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಆಗಮಿಸುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆ ತಿಳಿಸಿದೆ.

### ವಿಜಯಪುರ ಸೈಕ್ಲಿಂಗ್ ಗ್ರುಪ್ ಸಹಯೋಗ | ರವಿವಾರ ಸಂಜೆ 7ಗಂ. ಆರಂಭ | ಬಸವಜ್ಯೋತಿ ಪಾದಯಾತ್ರೆ ಆಯೋಜಕ ಬಿ.ಬಿ.ಪಾಟೀಲ ಹೇಳಿಕೆ

# ಏ.19 ರಂದು ಬಸವನ ಬಾಗೇವಾಡಿಯಿಂದ ಬಸವಜ್ಯೋತಿ ಪಾದಯಾತ್ರೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಮಾನತೆಯ ಹರಿಕಾರ, ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸಣ್ಣನವರ ಜಯಂತಿ ನಿಮಿತ್ತ ಜನ್ಮಸ್ಥಳ ಬಾಗೇವಾಡಿಯಿಂದ ವಿಜಯಪುರದವರೆಗೆ ವಿಜಯಪುರ ಸೈಕ್ಲಿಂಗ್ ಗ್ರುಪ್ ಸಹಯೋಗದಲ್ಲಿ ಬಸವಜ್ಯೋತಿ ಪಾದಯಾತ್ರೆ ದಿ.19 ರವಿವಾರ ರಾ.7ಗಂ. ಆರಂಭಿಸಲಾಗುವುದು ಎಂದು ಆಯೋಜಕ ಬಿ.ಬಿ.ಪಾಟೀಲ ತಿಳಿಸಿದರು.

ವಿಜಯಪುರದಲ್ಲಿ ಬಸವಜ್ಯೋತಿ ಪಾದಯಾತ್ರೆ ನಿಮಿತ್ತ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಈ ಬಾರಿ ವಿಶಿಷ್ಟ ರೀತಿಯಲ್ಲಿ ಬಸವ ಜಯಂತಿ ಆಚರಿಸಲಾಗುವುದು. ಬಸವಣ್ಣನವರ ಜನ್ಮಸ್ಥಳ ಬಸವನ ಬಾಗೇವಾಡಿಯಲ್ಲಿ ಪಾದಯಾತ್ರಿಗಳು ಸಂ.6ಗಂ. ಹಾಜರಿರುವುದು. ಸಂ.6.30ಗಂ. ಪೂಜೆ ಸಲ್ಲಿಸಿದ ನಂತರ ರಾ.7ಗಂ. ಬಸವಜ್ಯೋತಿ ಪಾದಯಾತ್ರೆಗೆ ಬಸವನ ಬಾಗೇವಾಡಿ ವಿರಕ್ತಮಠದ ಪ.ಪೂ ಸಿದ್ದಲಿಂಗ ಸ್ವಾಮೀಜಿ ಚಾಲನೆ ನೀಡಲಿದ್ದಾರೆ. ಈ ಯಾತ್ರೆ ಮಸಬಿನಾಳ, ಉಕ್ಕಲಿ, ಉಕುಮನಾಳ ಮಾರ್ಗವಾಗಿ ಶಿವಗಿರಿ ತಲುಪಲಿದೆ. ನಂತರ ನಗರದ ಬಸವೇಶ್ವರ ವೃತ್ತದಲ್ಲಿ ಮುಕ್ತಾಯಗೊಳ್ಳಲಿದೆ. 50ಕಿ.ಮೀ ಮಾರ್ಗದುದ್ದಕ್ಕೂ ಪಾದಯಾತ್ರಿಗಳಿಗೆ ಅಲ್ಪೋಪಹಾರ ಮತ್ತು ಲಘುಪಾನಿಯ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಅವರು ತಿಳಿಸಿದರು.

ಸ್ವಯಂ ಪ್ರೇರಿತರಾಗಿ 150ಕ್ಕೂ ಹೆಚ್ಚು ಬಸವಾನುಯಾಯಿಗಳು ನೋಂದಣಿ ಮಾಡಿಕೊಂಡಿದ್ದು ಪಾದಯಾತ್ರೆಯಲ್ಲಿ ಭಾಗವಹಿಸಿದವರಿಗೆ ಟಿ-ಶರ್ಟ್, ಪದಕ ಮತ್ತು ಪ್ರಮಾಣ ಪತ್ರ ನೀಡಲಾಗುವುದು ಎಂದು ಆಯೋಕ ಬಿ ಬಿ ಪಾಟೀಲ ತಿಳಿಸಿದರು.



ಈ ಸಂದರ್ಭದಲ್ಲಿ ಕೋಟಿವೃಕ್ಷ ಅಭಿಯಾನ ಸಂಚಾಲಕ ಡಾ.ಮುರುಗೇಶ ಪಟ್ಟಣಶೆಟ್ಟಿ, ವಿಸಿಜಿ ಉಪಾಧ್ಯಕ್ಷ ಶಿವನಗೌಡ ಪಾಟೀಲ, ಕಾರ್ಯದರ್ಶಿ ಸೋಮಶೇಖರ ಸ್ವಾಮಿ, ಸದಸ್ಯರಾದ ಶಾಂತೇಶ ಕಳಸಗೊಂಡ, ಸಂತೋಷ ಔರಸಂಗ, ಡಾ.ರಾಜು ಯಲಗೊಂಡ, ಶಂಭು ಕರ್ಪೂರಮಠ, ಡಿ.ಕೆ.ತಾವಸೆ, ಗುರುಶಾಂತ ಕಾಪಸೆ, ಅಶ್ಪಾಕ ಮನಗೂಳಿ, ಸಿದ್ದು ನಾಯ್ಕೋಡಿ, ಸೋಮು ಮಠ, ವಿಜಯಕುಮಾರ ಕೋರೆ, ಅಮೀತ ಬಿರಾದಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಮಾನವೀಯತೆ ಸಂದೇಶ ವೇದಿಕೆ ವತಿಯಿಂದ ಊಟ ವಿತರಣೆ

■ **ಉದಯರಶ್ಮಿ ದಿನಪತ್ರಿಕೆ**

ಸಿಂದಗಿ: ಅಖಿಲ ಭಾರತ ಮಾನವೀಯತೆ ಸಂದೇಶ ವೇದಿಕೆ ಸಿಂದಗಿ ಶಾಖೆಯ ವತಿಯಿಂದ ಸಿಂದಗಿ ನಗರದ ಮೂರು ಪ್ರಮುಖ ಆಸ್ಪತ್ರೆಯಲ್ಲಿ ಹಳ್ಳಿಗಳಿಂದ ಬಂದ ರೋಗಿಗಳಿಗೆ ಮತ್ತು ಹಸಿದವರಿಗ ಹಾಗೂ ಬಸ್ ನಿಲ್ದಾಣದಲ್ಲಿ ರಾತ್ರಿಯ ಹೊತ್ತು ಪ್ರಯಾಣ ಮಾಡುವ ನೂರ, ಐವತ್ತು ಪ್ರಯಾಣಿಕರಿಗೆ ಸಂಜೆಯ ಊಟ ವಿತರಿಸಲಾಯಿತು.

ಹಸಿವು ಮುಕ್ತ ಸಮಾಜವೆಂದರೆ ಎಲ್ಲರಿಗೂ ಆಹಾರ ಲಭ್ಯವಾಗುವ ಸಮಾಜವಾಗಬೇಕು. ಇದು ಮೂಲಭೂತ ಮಾನವ ಹಕ್ಕು. ನಾವು ಒಟ್ಟಾಗಿ ಕೆಲಸ ಮಾಡಿದರೆ, ಹಸಿವನ್ನು ನಿರ್ಮೂಲನೆ ಮಾಡಬಹುದು.


ಪ್ರತಿ ಊಟವೂ ಒಂದು ಉಡುಗೊರೆ. ಹಸಿದವರಿಗೆ ಊಟ ನೀಡುವುದು ನಮ್ಮ ಕರ್ತವ್ಯ. ನಾವು ಆಹಾರವನ್ನು ವ್ಯರ್ಥ ಮಾಡಬಾರದು. ಬದಲಿಗೆ ಅದನ್ನು ಅಗತ್ಯವಿರುವವರಿಗೆ ಹಂಚಬೇಕು. ಹಸಿವು ಮುಕ್ತ ಸಮಾಜಕ್ಕಾಗಿ, ನಾವು ಒಗ್ಗಟ್ಟಾಗಿ ನಿಲ್ಲೋಣ ಎಂದು ಮೌಲಾನಾ ದಾವೂದ ನದ್ವಿ ಹೇಳಿದರು.

ಇದೇ ರೀತಿ ಮೌಲಾನಾ ಕಲೀಮುಲ್ಲಾಹ ನದ್ವಿ




ಹಸಿದವರಿಗೆ ಊಟ ನೀಡುವ ಸೇವೆಯು ಬಹಳ ಶ್ರೇಷ್ಠವಾದ ಕೆಲಸ. ಇದು ನಮ್ಮ ಸಮಾಜದಲ್ಲಿ ಬಡತನ ಮತ್ತು ಹಸಿವಿನ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ ಎಂಬ ಸಂದೇಶ ತಿಳಿಸಿ ಹೇಳಿದರು. ಬಹುತೇಕ ಜನರು ಈ ಕಾರ್ಯಕ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾರುಖ್ ಯಲಗಾರ ಯಾಸೀನ ಸಿಂದಗಿಕರ ಮುಜಮ್ಮಿಲ ಪಯ್ಯಾಜ ನದ್ವಿ ಅಬೂಹುರೈರಾ ನದ್ವಿ ನಬಿ ಇತರರು ಭಾಗವಹಿಸಿದ್ದರು.



# ಮಿರಗಿ ಗೋಳಸಾರ ಗ್ರಾಮದ ಹಳ್ಳಕ್ಕೆ ನೀರು ಹರಿಸಲು ಪ್ರತಿಭಟನೆ

■ **ಉದಯರಶ್ಮಿ ದಿನಪತ್ರಿಕೆ**

ಇಂಡಿ: ತಾಲೂಕಿನ ಮಿರಗಿ ಹಳ್ಳ ಮತ್ತು ಗೋಳಸಾರ ಗ್ರಾಮಕ್ಕೆ ಕೃಷ್ಣಾ ಕಾಲುವೆ ಮುಖಾಂತರ ನೀರು ಹರಿಸಿ ನೀರಿನ ತೊಂದರೆ ತಪ್ಪಿಸಬೇಕೆಂದು ಆಗ್ರಹಿಸಿ ಇಂದು ಗ್ರಾಮದ ರೈತರು ಆಡಳಿತ ಸೌಧ ಎದುರು ಪ್ರತಿಭಟನೆ ನಡೆಸಿದರು.

ಕರವೇ ತಾಲೂಕಾ ಅಧ್ಯಕ್ಷ ಬಾಳು ಮುಳಜಿ ಮಾತನಾಡಿ ಮಿರಗಿ ಹಳ್ಳಕ್ಕೆ ಕೃಷ್ಣಾ ಕಾಲುವೆ ನೀರು ಹರಿಸಿದರೆ ಮಿರಗಿ, ಗೋಳಸಾರ, ನಾದ ಸಂಗೋಗಿ, ಶಿರಶ್ಯಾಡ ಈ ಎಲ್ಲ ಗ್ರಾ.ಪಂ ಗಳಿಗೆ ಕುಡಿಯುವ ನೀರಿನ ಅನುಕೂಲವಾಗುತ್ತದೆ ಕಾರಣ ಕಾಲುವೆ ಮುಖಾಂತರ ಹಳ್ಳಕ್ಕೆ ನೀರು ಹರಿಸಬೇಕು ಎಂದು ಆಗ್ರಹಿಸಿದರು. ರೈತ ಮುಖಂಡ ಶ್ರೀಶೈಲ ಮದರಿ ಮಾತನಾಡಿದರು. ಪ್ರತಿಭಟನೆಯಲ್ಲಿ ಬಸವರಾಜ ಖಸ್ಕಿ, ಭೀಮಣ್ಣ ಅವಟಿ, ಬಸವರಾಜ ಭಂಥನಾಳ, ಶಿವಲಿಂಗಪ್ಪ ರೋಡಗಿ, ಯಲ್ಲಪ್ಪ ಗಾಳಿ, ಶಿವಾನಂದ ಕಲಶೆಟ್ಟಿ, ರವಿಕಾಂತ ರೋಡಗಿ, ಭೀಮರಾಯ ಹಳ್ಳಿ, ಕಾಂತಪ್ಪ ಗಡೆಕರ, ಸುರೇಸ ಪಾಟೀಲ, ನಾಮದೇವ ಸಾಳುಂಕೆ, ಅಶೋಕ ಆನೂರ, ಶಿವಲಿಂಗಪ್ಪ ರೋಡಗಿ ಮತ್ತಿತರಿದ್ದರು. ತಹಸೀಲ್ದಾರ ಬಿ.ಎಸ್. ಕಡಕಬಾವಿ ಇವರಿಗೆ ಮನವಿ ಸಲ್ಲಿಸಿದರು.

# ಬಡತನ ನಡುವೆಯೂ ಉತ್ತಮ ಅಂಕಗಳನ್ನು ಪಡೆದ ಕನಕರಾಜ್

■ **ಉದಯರಶ್ಮಿ ದಿನಪತ್ರಿಕೆ**

ಹೆಚ್ ಡಿ ಕೋಟೆ: ಬಡತನ ಎಂದಿಗೂ ಶಿಕ್ಷಣಕ್ಕೆ ಅಡ್ಡಿಯಾಗುವುದಿಲ್ಲ, ಬದಲಾಗಿ ಛಲ ಮತ್ತು ಆತ್ಮವಿಶ್ವಾಸವಿದ್ದರೆ ಎಂತಹ ಕಷ್ಟದ ಪರಿಸ್ಥಿತಿಯಲ್ಲೂ ವಿದ್ಯಾಭ್ಯಾಸದಲ್ಲಿ ಸಾಧನೆಯ ಮೆಟ್ಟಿಲು ಹತ್ತಬಹುದು.ಬಡತನ ಕುಟುಂಬದಲ್ಲಿ ಹುಟ್ಟಿರೋದು ತಪ್ಪಲ್ಲ. ಅದನ್ನು ಯಾರು ಹೇಳಿ ಕೇಳಿ ಪಡೆದುಕೊಂಡು ಬಂದಿರುವುದಿಲ್ಲ. ಆದರೆ ಬಡತನ ಎಂಬ ಕುಂಟುನೆಪ ಇಟ್ಕೊಂಡು ನಿನ್ನ ದಾರಿಗೆ ನೀನೇ ಮುಳ್ಳಿನ ಬೇಲಿ ಹಾಕಿಕೊಳ್ಳುವುದು ಮೂರ್ಖತನ. ಯಾಕೆ ಈ ಮಾತು ಹೇಳ್ತಿದ್ದೀವಿ ಅಂದ್ರೆ ಮನೆಯಲ್ಲಿ ಬಡತನವಿದೆ. ವಿದ್ಯಾಭ್ಯಾಸದಲ್ಲಿ ಹೇಗೆ ಮುಂದುವರೆಯುವುದು ಎಂಬಿತ್ಯಾದಿ ವಿಚಾರಗಳನ್ನು ತಲೆಗೆ ತುಂಬಿಸಿಕೊಂಡು ಮನೆಯಲ್ಲಿ ಕುಳಿತು ಯೋಚಿಸುತ್ತಿದ್ದರೆ ಇವತ್ತು ಕನಕರಾಜ್ ಎಸ್ ದ್ವಿತೀಯ ಪಿಯು ಪರೀಕ್ಷೆ ಬರೆಯಲು ಸಾಧ್ಯವಾಗುತ್ತಿರಲಿಲ್ಲ. ಮುಂದಿನ



ವಿದ್ಯಾಭ್ಯಾಸ ಮಾಡಲು ಸಾಧ್ಯವಾಗುತ್ತಿರಲಿಲ್ಲ. ಅಪ್ಪ–ಅಪ್ಪನ ಮುಖದಲ್ಲಿ ಸಾರ್ಥಕತೆ ಭಾವನೆ ಮೂಡಲು ಸಾಧ್ಯವಾಗುತ್ತಿರಲಿಲ್ಲ. ಹೆಚ್ ಡಿ ಕೋಟೆ ತಾಲೂಕಿನ ಹೈರಿಗೆ ಗ್ರಾಮದ ಸಿದ್ದಲಿಂಗೇಗೌಡ ಪುತ್ರ ಕನಕರಾಜ್ ಎಸ್ ಬಡತನ ನಡುವೆಯೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಾಧನೆಗೈದಿದ್ದಾರೆ. ಉತ್ತಮ ಅಂಕಗಳನ್ನು ಪಡೆದು ಹುಟ್ಟೂರಿನ ಹಾಗೂ ಕುಟುಂಬದ ಸಂಭ್ರಮಕ್ಕೆ ಕಾರಣರಾಗಿದ್ದಾರೆ. ಸಿದ್ದಲಿಂಗೇಗೌಡ– ಶ್ವೇತಾ ದಂಪತಿಯ ಪುತ್ರನಾಗಿರುವ ಕನಕರಾಜ್, ದ್ವಿತೀಯ ಪಿಯು ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದಲ್ಲಿ 600 ಅಂಕಗಳಿಗೆ 548 ಅಂಕಗಳನ್ನು ಪಡೆದಿದ್ದಾರೆ. ಉತ್ತಮ ಫಲಿತಾಂಶ ಪಡೆದಿರುವುದಕ್ಕೆ ರೈತ ಪರ್ವ ಸಂಘದ ರಾಜ್ಯ ಕಾರ್ಯಾಧ್ಯಕ್ಷ ನವೀನ್ ಕುಮಾರ್ ಅಭಿನಂದನೆ ಸಲ್ಲಿಸಿದ್ದಾರೆ. ಅವನ ಮುಂದಿನ ವಿದ್ಯಾಭ್ಯಾಸಕ್ಕೆ ತಮ್ಮ ಕೈಲಾದ ಸಹಾಯ ಮಾಡುವುದಾಗಿ ಭರವಸೆ ನೀಡಿದ್ದಾರೆ.

# ರಾಸಾಯನಿಕ ಗೊಬ್ಬರ ತ್ಯಜಿಸಿ, ಸಾವಯವ ಗೊಬ್ಬರ ಬಳಸಿ :ಶಾಸಕ ಅನಿಲ್ ಚಿಕ್ಕಮಾದು

■ **ಉದಯರಶ್ಮಿ ದಿನಪತ್ರಿಕೆ**

ಹೆಚ್ ಡಿ ಕೋಟೆ: ಕೃಷಿಯಲ್ಲಿ ನಿರಂತರ ರಾಸಾಯನಿಕ ಗೊಬ್ಬರ ಬಳಕೆಯಿಂದ ಭೂಮಿಯ ಫಲವತ್ತತೆ ಕಡಿಮೆಯಾಗುತ್ತಿದ್ದು, ಇಳುವರಿ ಕುಂಠಿತವಾಗುತ್ತಿದೆ. ಮಣ್ಣಿನ ಸಾರಾಂಶ ಸಂರಕ್ಷಿಸುವ ನಿಟ್ಟಿನಲ್ಲಿ ರಾಸಾಯನಿಕ ಗೊಬ್ಬರ ಬದಲಾಗಿ ಸಾವಯವ ಗೊಬ್ಬರ ಬಳಕೆ ಮಾಡಬೇಕೆಂದು

ಶಾಸಕ ಅನಿಲ್ ಚಿಕ್ಕಮಾದು ರೈತರಿಗೆ ಸಲಹೆ ನೀಡಿದರು.

ತಾಲೂಕಿನ ಮೈಸೂರು–ಮಾನಂದವಾಡಿ ಮಾರ್ಗ ಮಧ್ಯೆದಲ್ಲಿರುವ ಲಕ್ಷ್ಮೀಪುರದಲ್ಲಿ ನೂತನವಾಗಿ ಆರಂಭವಾಗಿರುವ ಮೈಟೆಕ್ ಆಗ್ರೋ ಸಲ್ಯೂಷನ್ಸ್ ಕಚೇರಿ ಓಪನ್ ಮಾಡಿ ಮಾತನಾಡಿದರು. ಈ ಹಿಂದೆ ನಮ್ಮ ಪೂರ್ವಜರು ಸಾವಯವ ಗೊಬ್ಬರ ಬಳಸಿ, ಜಮೀನಿನಲ್ಲಿ ತರಕಾರಿ ಸೇರಿದಂತೆ ವಾಣಿಜ್ಯ ಬೆಳೆಗಳನ್ನು ಬೆಳೆಯುತ್ತಿದ್ದರು. ಈ ಪದ್ಧತಿಯು ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುವುದರ ಜೊತೆಗೆ ಮಾನವನ ಆರೋಗ್ಯಕ್ಕೂ ಸಹಕಾರಿಯಾಗಿತ್ತು. ನೈಸರ್ಗಿಕವಾಗಿ ಬೆಳೆದ ತರಕಾರಿಗಳನ್ನು ತಿಂದು ಮನುಷ್ಯ 100–120 ವರ್ಷಗಳವರೆಗೆ ಬದುಕುತ್ತಿದ್ದರು. ಆದರೆ ಇತ್ತೀಚಿಗೆ ಜಾಸ್ತಿ ಕೆಮಿಕಲ್ಸ್ ಬಳಕೆ ಮಾಡುವುದರಿಂದ ಭೂಮಿಯ ಆರೋಗ್ಯ ಕೆಡುವುದರ ಜೊತೆಗೆ ಮನುಷ್ಯ ಜೀವಿಯು ಕೂಡ ಅನಾರೋಗ್ಯಕ್ಕೆ ತುತ್ತಾಗಿ 30 ವರ್ಷದ ಆಸುಪಾಸಿನಲ್ಲೇ ಅಕಾಲಿಕ ಮರಣಕ್ಕೀಡಾಗುತ್ತಿದ್ದಾರೆ. ದಯವಿಟ್ಟು ತಾಲೂಕಿನ ಜನತೆ ಸಾವಯವ ಗೊಬ್ಬರ ಬಳಸಿ ಶುಂಠಿ, ಬಾಳೆ ಸೇರಿದಂತೆ ತರಕಾರಿ ಬೆಳೆಗಳನ್ನು ಬೆಳೆಯಬೇಕೆಂದು ಶಾಸಕ ಅನಿಲ್ ಚಿಕ್ಕಮಾದು ಮನವಿ ಮಾಡಿದರು.



ಕೃಷಿ ಸೂಕ್ಷ್ಮ ಸಸ್ಯಾಭಿವೃದ್ಧಿ ಘಟಕ ಮಾಲೀಕರಾದ ಜೋಮೆಟ್ ಜಾನ್ ಮಾತನಾಡಿ, ಹೆಚ್ಚಾಗಿ ರಾಸಾಯನಿಕ ಗೊಬ್ಬರ ಬಳಕೆಯಿಂದ ಭೂಮಿ ಬರುಡಾಗಿ ಇಳುವರಿ ಕುಂಠಿತವಾಗುತ್ತದೆ. ಇದರಿಂದ ರೈತ ಆದಾಯಕ್ಕಿಂತ ಹೆಚ್ಚಾಗಿ ನಷ್ಟ ಅನುಭವಿಸಿ, ಸಾಲದ ಸುಳಿಯಲ್ಲಿ ಸಿಲುಕುತ್ತಿದ್ದಾನೆ. ಆದರೆ ನಾವು ಕೊಡುವ ಸಾವಯವ ಗೊಬ್ಬರ ಬಳಸುವುದರಿಂದ ಅಧಿಕ ಇಳುವರಿ ಪಡೆಯಬಹುದು. ನಾವು ಏಕಾಏಕಿ ಗೊಬ್ಬರ ಕೊಡುವುದಿಲ್ಲ. ಮೊದಲು ನಿಮ್ಮ ಜಮೀನಿಗೆ ತೆರಳಿ ಮಣ್ಣು ಟೆಸ್ಟ್ ಮಾಡುತ್ತೇವೆ. ಬಳಿಕ ನೀವು ಬೆಳೆಯುವ ಬೆಳೆ ಆಧಾರದ ಮೇಲೆ ಸಾವಯವ ಗೊಬ್ಬರ ಕೊಡುತ್ತೇವೆ. ಇದರಿಂದರೈತ ಊಹೆಗೂ ಮೀರಿ ಉತ್ತಮ ಬೆಳೆ ಬೆಳೆಯಬಹುದು. ಕಡಿಮೆ ಖರ್ಚಿನಲ್ಲಿ ಅಧಿಕ ಇಳುವರಿ ಪಡೆಯಬಹುದು ಎಂದರು.

ಈ ವೇಳೆ ರೈತ ಪರ್ವ ಸಂಘದ ರಾಜ್ಯ ಕಾರ್ಯಾಧ್ಯಕ್ಷ ವೈ. ಎಲ್ ನವೀನ್ ಕುಮಾರ್, ಪುರಸಭೆ ಮಾಜಿ ಸದಸ್ಯ ಪ್ರೇಮ್ ಸಾಗರ್, ರೈತ ಪರ್ವ ಸಂಘದ ಸಿದ್ದಲಿಂಗೇಗೌಡ, ಇಂದಿರಾ ಸೇರಿದಂತೆ ಅನೇಕ ಮಂದಿ ಉಪಸ್ಥಿತರಿದ್ದರು.

# ಮಾನವೀಯತೆ ಸಂದೇಶ ವೇದಿಕೆಯಿಂದ ಕುಡಿವ ನೀರಿನ ಅರವಟಿಗೆ ಸೌಲಭ್ಯ

■ **ಉದಯರಶ್ಮಿ ದಿನಪತ್ರಿಕೆ**

ಸಿಂದಗಿ: ಅಖಿಲ ಭಾರತ ಮಾನವೀಯತೆ ಸಂದೇಶ ವೇದಿಕೆ ವತಿಯಿಂದ ಸಿಂದಗಿ ನಗರದಲ್ಲಿ ಕುಡಿಯುವ ನೀರಿನ ಅರವಟಿಗೆ ಸೌಲಭ್ಯ ಕಲ್ಪಿಸಿ ಮಾನವೀಯತೆ ಮೆರೆದಿದೆ.

ಸುಡು ಬೇಸಿಗೆ ಹೆಚ್ಚುತ್ತಿರುವ ತಾಪಮಾನವನ್ನು ಗಮನದಲ್ಲಿ ಇಟ್ಟುಕೊಂಡು ಅಖಿಲ ಭಾರತ ಮಾನವೀಯತೆ ಸಂದೇಶ ವೇದಿಕೆಯು ನಗರದ ಪ್ರಮುಖ ಸ್ಥಳಗಳಲ್ಲಿ ನೀರಿನ ಅರವಟಿಗೆ ಅಳವಡಿಸಿ ಜನಸಾಮಾನ್ಯರಿಗೆ, ಬಾಯಾರಿ ಬಂದವರಿಗೆ ನೀರಿನ ದಾಹ ತಣಿಸುವ ಕಾರ್ಯ ಮಾಡುತ್ತಿದೆ.

ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಪೊಲೀಸ್ ಠಾಣೆ ಇನ್ನು ಹಲವಾರು ನಗರದ ಪ್ರಮುಖ ಬೀದಿಗಳಲ್ಲಿ ನೀರಿನ ಅರವಟಿಗೆಯನ್ನು ಅಳವಡಿಸಿ ಈ ಸೇವೆಯ ಕಾರ್ಯಗೆ ಚಾಲನೆ ನೀಡಲಾಯಿತು.

ಈ ಸೇವೆ ಸುಮಾರು ಹತ್ತು ವರ್ಷಗಳಿಂದ ಸಿಂದಗಿ ನಗರದಲ್ಲಿ ತುಂಬಾ ಯಶಸ್ವಿಯಾಗಿ ಮುಂದುವರೆಯುತ್ತಿದೆ. ಸಾರ್ವಜನಿಕರಿಂದ ವೇದಿಕೆಯ ಈ ಸೇವೆ ಮೆಚ್ಚುಗೆಗೆ ಪಾತ್ರವಾಗುತ್ತಿದೆ. ಇಂತಹ ಸೇವೆಯ ಭಾವನೆಯಿಂದ ಸುಂದರ ಸಮಾಜದ ನಿರ್ಮಾಣ ಸಾಧ್ಯ ಇಂತಹ ಕಾರ್ಯದಿಂದ ಜನಸಾಮಾನ್ಯರಿಗೆ, ಕಛೇರಿಗೆ ಬರುವ ಹಳ್ಳಿ ಭಾಗದ ಜನರಿಗೆ ತುಂಬಾ ಅನುಕೂಲವಾಗುವುದು ಹಾಗೂ ಮಾನವೀಯ ಮೌಲ್ಯವನ್ನು ಬೆಳೆಸುವಲ್ಲಿ ವೇದಿಕೆಯ ಪಾತ್ರ ಬಹುಮುಖ್ಯವಾಗಿದೆ. ಎಂದು ಸರ್ವ ಸದಸ್ಯರ ವತಿಯಿಂದ ವೇದಿಕೆಯ ಅಧ್ಯಕ್ಷ ಮೌಲಾನಾ ದಾವುದ ನದ್ವಿ ತಿಳಿಸಿದರು.



ಮೌಲಾನ ಕಲೀಮುಲ್ಲಾಹ ನದ್ವಿ ಈ ಸೇವೆಗೆ ಸಹಕಾರ ಸಾಹಾಯ ನೀಡಿದ ಎಲ್ಲ ದಾನಿಗಳಿಗೆ ಧನ್ಯವಾದಗಳು ತಿಳಿಸಿದರು. ಯೂನುಸ ಶೇಖ. ಜಾಕಿರಹುಸೇನಸಾಬ ಅಂಗಡಿ, ಹುಸೇನಸಾಬ ಮುಲ್ಲಾ, ಇಲಿಯಾಸ ಬಿರಾದಾರ, ಮುಷ್ತಾಕಸಾಬ ಅತ್ತಾರ, ಮೌಲಾನಾ ಮುಹ್ಮದ ಅಲಿಸಾಬ, ಇಮ್ತಿಯಾಜಸಾಬ ಆಸಿಫಸಾಬ,ಸಾಜಿದ ಮೋಗಲಾಯಿ ,ಹಾಜಿ ನಾಸಿರಸಾಬ ಮತ್ತು ಇತರ ದಾನಿಗಳ ಈ ಕಾರ್ಯ ತುಂಬಾ ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕ ಆಸ್ಪತ್ರೆ ಸಿಬ್ಬಂದಿ ಪೋಲಿಸ ಅಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರೀಮತಿ ಮಹಾದೇವಮ್ಮ ಬಿ. ಪಾಟೀಲ್ ಸ್ಮಾರಕ ಸಿಬಿಎಸ್‌ಸಿ ಶಾಲೆಗೆ ಶೇಕಡಾ 99ರಷ್ಟು ಫಲಿತಾಂಶ

■ **ಉದಯರಶ್ಮಿ ದಿನಪತ್ರಿಕೆ**

ಚಿತ್ತಾಪುರ: ಪಟ್ಟಣದ ವಿಶ್ವಗುರು ಶಿಕ್ಷಣ ಹಾಗೂ ಕಲ್ಯಾಣ ಸಂಸ್ಥೆಯ ಶ್ರೀಮತಿ ಮಹಾದೇವಮ್ಮ ಬಿ.ಪಾಟೀಲ್ ಸ್ಮಾರಕ ಸಿಬಿಎಸ್‌ಸಿ ಶಾಲೆ, 2025–26ನೇ ಸಾಲಿನ ಸಿಬಿಎಸ್‌ಸಿ 10ನೇ ತರಗತಿಯ ಪರೀಕ್ಷೆಯಲ್ಲಿ ಶೇಕಡಾ 99ರಷ್ಟು ಅತ್ಯುತ್ತಮ ಫಲಿತಾಂಶವನ್ನು ದಾಖಲಿಸುವ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಮೈಲಿಗಲ್ಲು ಸ್ಥಾಪಿಸಿದೆ ಎಂದು ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನಾಗರೆಡ್ಡಿ ಪಾಟೀಲ್ ಕರದಾಳ್ ಅವರು ತಿಳಿಸಿದ್ದಾರೆ.ಪ್ರೇಮ್ ಕಪಿಲ್ ಜಿತುರೆ ವಿದ್ಯಾರ್ಥಿಯು 472 ಶೇಕಡಾ 94.40 ಪಡೆಯುವ ಮೂಲಕ ಶಾಲೆಗೆ ಪ್ರಥಮ ಸ್ಥಾನ ಗಳಿಸಿದ್ದು, ಚೇತನ್ ಬಸವರಾಜ್ 465 ಶೇ.93, ಪಡೆಯುವ ಮೂಲಕ ದ್ವಿತೀಯ ಸ್ಥಾನ ಗಳಿಸಿದ್ದಾನೆ. ಉಳಿದಂತೆ ಎಮ್. ಡಿ. ಅಯಾನ್ ಅಲೀಮ್ ಸಾಬ್ 456 ಶೇ.91.20, ರಕ್ಷಿತಾ ಬಸವರಾಜ್ 445 ಶೇ. 89, ಸೃಷ್ಟಿ ಗುಂಡಪ್ಪಾ 438 ಶೇ.87.60, ಮುನೀಂದ್ರ ಶಿವಕುಮಾರ 420 ಶೇ.84, ಅಖೀಲಾ ಆರ್. ಎಸ್. ರಾಮಾಚಾರ್ಯ ಎಸ್ 414 ಶೇ.82.80, ಆಚಲ್ ಸಚೀನ ಜಿತುರೆ 408 ಶೇ.81.60, ಬಸರೆಡ್ಡಿ ಶರಣರೆಡ್ಡಿ ಇಜಾರ 403 ಶೇ.80.60, ಮಹ್ಮದ ಅಲ್ತಾಫ್ ಶರಫೋದ್ದೀನ್ 400 ಶೇ.80 ಅಂಕ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ಒಟ್ಟು 56 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 56 ವಿದ್ಯಾರ್ಥಿಗಳಲ್ಲಿ 18 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ (ಡಿಸ್ಟಿಂಕ್ಷನ್), 19 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 16 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಮತ್ತು 2 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ವಿದ್ಯಾರ್ಥಿಗಳ ಅಮೋಘ ಸಾಧನೆಗೆ ಸಂಸ್ಥೆಯ ಅಧ್ಯಕ್ಷರು, ಪ್ರಾಂಶುಪಾಲರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.



# ಜೀವನೋತ್ಸಾಹವೇ ಸಾಧನೆಗೊಂದು ಪ್ರೇರಣೆ

■ **ಉದಯರಶ್ಮಿ ದಿನಪತ್ರಿಕೆ**

**ಭಾವರಶ್ಮಿ**

ರಷಿಯನ್ ತತ್ವಜ್ಞಾನಿ ಹಾಗೂ ಹೋರಾಟಗಾರ ಸ್ಟಾಲಿನ್ ರವರು ಹೇಳಿರುವಂತೆ,"ಜೀವನ–ಬದುಕು ಎಂಬುದು ನಿಮಗೆ ನೇರವಾಗಿ ಯಶಸ್ಸನ್ನು ತಂದು ಕೊಡುವುದಿಲ್ಲ. ಅದು ನಮಗೆ ಸಾಧ್ಯತೆಗಳು ಮತ್ತು ಅವಕಾಶಗಳನ್ನು ನೀಡುತ್ತದೆ. ನಮ್ಮಲ್ಲಿರುವ ಶಕ್ತಿ–ಸಾಮರ್ಥವನ್ನು ಸಮರ್ಥವಾಗಿ ಬಳಸಿಕೊಂಡು ಅವುಗಳನ್ನು ಯಶಸ್ಸನ್ನಾಗಿ ಬದಲಾಯಿಸಿಕೊಳ್ಳುವುದು ನಮ್ಮ ಕೈಯಲ್ಲಿದೆ" ಎಂದು ಹೇಳಿದ್ದಾರೆ.

ಕಠಿಣ ಪರಿಶ್ರಮ ಮತ್ತು ಛಲಗಾರಿಕೆ ಇದ್ದರೆ ಎಂತಹ ಗ್ರಾಮೀಣ ಪ್ರತಿಭೆಯು ರಾಷ್ಟ್ರಮಟ್ಟದಲ್ಲಿ ಅಮೋಘ ಸಾಧನೆ ತೋರಬಹುದು. ರಾಜಸ್ಥಾನದ ಸಾಂಪ್ರದಾಯಿಕ ಸಾಮಾಜಿಕ ಪದ್ಧತಿ 'ಆತಾ–ಸಾತಾ' ಹೆಸರಿನಲ್ಲಿ ಕುಟುಂಬಗಳು ಮದುವೆ ಸಂದರ್ಭದಲ್ಲಿ ಹೆಣ್ಣು ಮಕ್ಕಳನ್ನು ವಿನಿಮಯ (ಬೇರೆ ಮನೆಗೆ ಹೆಣ್ಣು ಕೊಟ್ಟು ತೆಗೆದುಕೊಳ್ಳುವ ಪದ್ಧತಿ) ಮಾಡಿಕೊಳ್ಳುವ ಪದ್ಧತಿಯಡಿಯಲ್ಲಿ ಕೇವಲ 10 ವರ್ಷದವಳಿದ್ದಾಗಲೇ ತಂದೆ ಸಂಬಂಧಿಗೆ ವಿವಾಹ ಮಾಡಿಕೊಟ್ಟಿದ್ದರು. ಸಾಮಾಜಿಕ ಕಟ್ಟಳೆ, ಸಾಂಪ್ರದಾಯಿಕ ಅಡೆತಡೆ ಮತ್ತು ಸವಾಲುಗಳನ್ನು ಮೀರಿ, ಹಠಮಾರಿ ಹೆಣ್ಣಾಗಿ ಬೆಳೆದು ಇಡೀ ದೇಶವೇ ನಿಬ್ಬೆರಗಾಗುವಂತೆ ಸಾಧನೆ ಮಾಡಿ ತೋರಿದ ಗ್ರಾಮೀಣ ಹುಡುಗಿ ಅವಳು.

ಇವರು ಯಾರ ಬಗ್ಗೆ ಹೇಳೋಕ ಹೊರಟಿದ್ದಾರೆ ಅಂದುಕೊಂಡೀರಾ? ಇವರು ಬೇರಾರೂ ಅಲ್ಲ. ಅವರೇ ರಾಜಸ್ಥಾನದ ದುರ್ಗಾ ಕುಮಾವತ್. ಸಾಮಾಜಿಕ ನಿರ್ಬಂಧಗಳನ್ನು ಎದುರಿಸಿ, ಜೀವನದಲ್ಲಿ ಸಾಧಿಸಿಯೇ ತೀರುತ್ತೇನೆಂಬ ದೃಢ ಸಂಕಲ್ಪದೊಂದಿಗೆ ವೇಟ್ ಲಿಫ್ಟಿಂಗ್ (ಭಾರ ಎತ್ತುವಿಕೆ) ಕ್ರೀಡೆಯಲ್ಲಿ ರಾಷ್ಟ್ರಮಟ್ಟದಲ್ಲಿ ಮೈಲಿಗಲ್ಲು ಸಾಧಿಸಿದ ಹೆಣ್ಣು ಆಕೆ.

ಜೀವನವೆಂಬುದು ಒಂದು ಸಾಗರವಿದ್ದಂತೆ. ಆ ಸಾಗರವನ್ನು ಈಜುವಾಗ ಹತ್ತು ಹಲವು ತೊಂದರೆ, ಸಮಸ್ಯೆ, ಮತ್ತು ಸವಾಲುಗಳು ಎದುರಾಗಬಹುದು. ಈಸಬೇಕು ಇದ್ದು ಜಯಿಸಬೇಕು ಎನ್ನುವಂತೆ, ಹೀಗೆ ಸಾಧನೆಯ ಪಯಣದಲ್ಲಿ ಎದುರಾಗುವ ಎಲ್ಲ ಸವಾಲುಗಳನ್ನು ಸಮರ್ಥವಾಗಿ ಎದುರಿಸಿ ಯಶಸ್ಸೆಂಬ ದಡವನ್ನು ಸೇರಲೇಬೇಕು. ಆದರಿಂದ ಅದು ನನಗೆ ಸಾಧ್ಯವಿಲ್ಲ, ಕೈಲಾಗದು ಮತ್ತು ಕಠಿಣವಾಗಿದೆ ಎಂಬಂತಹ ನಕಾರಾತ್ಮಕ ಭಾವದಿಂದ ಹೊರಬಂದು ನಮ್ಮಲ್ಲಿರುವ ಶಕ್ತಿ–ಸಾಮರ್ಥ್ಯ, ಜ್ಞಾನ, ಪ್ರತಿಭೆ, ಯುಕ್ತತೆ ಮತ್ತು ಕೌಶಲ್ಯಗಳಿಂದ ಜೀವನದಲ್ಲಿ ಅಸಾಧ್ಯವಾದುದು ಯಾವುದು ಇಲ್ಲ ಎಂಬುದನ್ನು ಅರಿತು ಕಾರ್ಯಪ್ರವೃತ್ತರಾದರೆ ಎಲ್ಲವು ಸಾಧ್ಯ.

**ಸಾಮಾಜಿಕ ಕಟ್ಟಳೆಗಳನ್ನು ಮೀರಿ ಬೆಳೆದ ಗ್ರಾಮೀಣ ಕ್ರೀಡಾ ಸಾಧಕಿ**

ರಾಜಸ್ಥಾನದ ಗ್ರಾಮೀಣ ಪ್ರದೇಶದಲ್ಲಿ ಜನಿಸಿದ ಈಕೆ 'ಹಳ್ಳಿಯ ಹುಡುಗಿ ಮುಸುಕಿನಲ್ಲೇ ಇರಬೇಕು' ಎಂಬ ಸಾಮಾಜಿಕ ನಿರ್ಬಂಧವನ್ನು ಮೀರಿ, ಕ್ರೀಡೆಯಲ್ಲಿ ಆಸಕ್ತಿ ತೋರಿದಳು. ಜೀವನದಲ್ಲಿ ಎಂತಹ ಸಮಸ್ಯೆ ಬಂದರೂ ಅದನ್ನು ಸಮರ್ಥವಾಗಿ ಎದುರಿಸಬಲ್ಲೆನೆಂಬ ಆತ್ಮವಿಶ್ವಾಸವೇ ಅವರ ಕ್ರೀಡಾ ಸಾಧನೆಗೆ ಮುನ್ನುಡಿ. ದುರ್ಗಾ ಕುಮಾವತ್




ಅವರು ತನಗೆ ಎಲ್ಲಿ ಅವಮಾನವಾಗಿದೆಯೋ ಅದೇ ಸಮಾಜದಿಂದಲೇ ಸನ್ಮಾನಕ್ಕೆ ಪಾತ್ರಳಾಗಬೇಕೆಂಬ ಅಚಲ ನಂಬಿಕೆ ಮತ್ತು ಧೈರ್ಯವೇ ಅವರನ್ನು ಕ್ರೀಡಾ ಕ್ಷೇತ್ರದಲ್ಲಿ ಎತ್ತರ ಮಟ್ಟಕ್ಕೇರಿಸಿತು. ಹೆಣ್ಣು ಅಬಲೆಯಲ್ಲ, ಸಮರ್ಥಳು ಎಂಬುದನ್ನು ಸಾಬೀತುಪಡಿಸಿದ ದುರ್ಗಾ ಕುಮಾವತ್

ಇನ್ನು 10 ವರ್ಷದವಳಿದ್ದಾಗಲೇ ಆಟವಾಡಿ ಬೆಳೆಯಬೇಕಾದ ಮಗು ದುರ್ಗಾ ಕುಮಾವತ್ ಬಾಲ್ಯ ವಿವಾಹಕ್ಕೆ ಒಳಗಾಗಿ ಅನೇಕ ಸಾಮಾಜಿಕ ಕಟ್ಟಳೆಗಳಿಂದ ಜರ್ಜರಿತವಾಗಿದ್ದರು. ಹೆಣ್ಣೆಂದರೆ ಮನೆಯ ನಾಲ್ಕು ಗೋಡೆಗಳ ಮಧ್ಯೆ ಅಡಿಗೆ–ಪಾತ್ರೆ–ಪಗಡೆ ಕೆಲಸಕ್ಕೆ ಮಾತ್ರ ಸೀಮಿತ ಎನ್ನುವಂತಿದ್ದ ಸಮಾಜಕ್ಕೆ ಹೆಣ್ಣು ಅಬಲೆಯಲ್ಲ, ಸಮರ್ಥಳು ಮತ್ತು ಸಬಲೆ ಎಂಬುದನ್ನು ಸಾಧನೆಯಿಂದಲೇ ತೋರಿಸಬೇಕೆಂಬ ಮಹತ್ವಾಕಾಂಕ್ಷೆಯನ್ನು ಹೊಂದಿದ್ದಳು. ಆದರೆ ದುರದೃಷ್ಟವಶಾತ್ ತಂದೆ ತೀವ್ರತರವಾದ ಕ್ಯಾನ್ಸರ್ ರೋಗದಿಂದ ಬಳಲುತ್ತಿರುವಾಗ ಅನಿವಾರ್ಯವಾಗಿ ತಂದೆ ಆರೈಕೆಗಾಗಿ ತವರುಮನೆಗೆ ತೆರಳಬೇಕಾಯಿತು. ಕಟ್ಟಡ ಕಾರ್ಮಿಕ, ಕಾರ್ಖಾನೆ ಮತ್ತು ಕೂಲಿಯಾಗಿ ಕೆಲಸ ಮಾಡುತ್ತಾ, ಕುಟುಂಬದ ನಿರ್ವಹಣೆಯ ನೊಗ ಹೊರಬೇಕಾಯಿತು.

ತನ್ನ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಮತ್ತು ಕ್ರೀಡೆಯಲ್ಲಿ ಅಮೋಘ ಸಾಧನೆ ಮಾಡಿ ತೋರಬೇಕೆಂಬ ಹಂಬಲದೊಂದಿಗೆ ದುರ್ಗಾ ಕುಮಾವತ್ ಅವರು ಜಿಮ್ ಸೇರಿ ತರಬೇತಿ ಪಡೆದರು. ಆಕೆಯಲ್ಲಿರುವ ಅಭಿರುಚಿ ಮತ್ತು ದೈಹಿಕ ಸಾಮರ್ಥ್ಯವನ್ನು ಮನಗಂಡ ತರಬೇತುದಾರ ಭಾರ–ಎತ್ತುವ ತರಬೇತಿ ನೀಡಿದರು. ಅದುವೇ ಆಕೆಯ ಜೀವನದ ದಿಕ್ಕನ್ನೇ ಬದಲಾಯಿಸಿತು. ಹೀಗೆಯೇ ಕ್ರೀಡಾ ಕ್ಷೇತ್ರದಲ್ಲಿ ಜಿಲ್ಲೆ, ರಾಜ್ಯಮಟ್ಟದಲ್ಲಿ ಉತ್ತಮ ಸಾಧನೆ ತೋರುತ್ತಾ, ರಾಷ್ಟ್ರಮಟ್ಟದಲ್ಲಿಯೂ 300 ಕೆ.ಜಿ. ವಿಭಾಗದಲ್ಲಿ ಎರಡನೇಯ ಸ್ಥಾನ ಪಡೆಯುವದರೊಂದಿಗೆ ಕ್ರೀಡೆಯಲ್ಲಿ ದಾಖಲೆ ದಾಖಲೆ ಮಾಡಿದರು. ದುರ್ಗಾ ಕುಮಾವತ್ ಅವರು ರಾಷ್ಟ್ರಮಟ್ಟದಲ್ಲಿ ವೇಟ್ ಲಿಫ್ಟಿಂಗ್‌ನಲ್ಲಿ ಕೀರ್ತಿ ಹೆಚ್ಚುತ್ತಾ ಗ್ರಾಮೀಣ ಪ್ರತಿಭೆ ಮನಸ್ಸು ಮಾಡಿದರೆ ಕ್ರೀಡೆಯಲ್ಲಿ ಏನೆಲ್ಲಾ ಸಾಧನೆ ಮಾಡಬಹುದು ಎಂಬುದಕ್ಕೆ ಸ್ಫೂರ್ತಿದಾಯಕ ಮತ್ತು ಯಶೋಗಾಥೆಯು ನಮಗೆಲ್ಲ ಮಾದರಿಯಾಗಿದೆ.



**ಕೊನೆಯ ನುಡಿ**

ಗೌತಮಬುದ್ಧ ಅವರ ಜೀವನ ಸಂದೇಶದಂತೆ, "ಇಂದಿನ ನಮ್ಮ ಸ್ಥಿತಿಗೆ ನಿನ್ನೆ ಇದ್ದ ನಮ್ಮ ಮನೋಭಾವ ಅಥವಾ ಮನೋಧೋರಣೆಗಳೇ ಕಾರಣ. ಅದರಂತೆ ನಾಳೆ ನಾವು ಏನಾಗಬೇಕು ಅಂದುಕೊಂಡಿರುತ್ತೇವೆಯೋ ಅಥವಾ ಬಯಸುತ್ತೇವೆಯೋ ಅದು ನಮ್ಮ ಮನೋಧರ್ಮದ ಬಗ್ಗೆ ಇಂದು ನಾವು ತೆಗೆದುಕೊಳ್ಳುವ ನಿರ್ಧಾರದ ಮೇಲೆ ಅವಲಂಬಿತವಾಗಿರುತ್ತದೆ" ಎಂದು ಹೇಳಿದ್ದಾರೆ. ಆದ್ದರಿಂದ ನಾವು ಯಶಸ್ಸಿಗೆ ಸುಲಭದಾರಿಗಳಿಲ್ಲ ಎಂಬುದನ್ನು ಅರಿತು ಸಮಚಿತ್ತ, ತಾಳ್ಮೆ, ನಮ್ಮ ಮೇಲಿನ ದೃಢ ನಂಬಿಕೆ, ಹಿಡಿದ ಕಾರ್ಯವನ್ನು ಪೂರ್ಣಗೊಳಿಸುವವರೆಗೆ ವಿರಮಿಸದೇ ಸತತ ಪ್ರಯತ್ನ, ದಿಟ್ಟಛಲ, ಮತ್ತು ಆತ್ಮವಿಶ್ವಾಸಗಳಿಂದ ಹೋರಾಡಿದರೆ ಯಶಸ್ಸು ಲಭಿಸುತ್ತದೆ.



ಲೇಖಕ
■ ಮಲ್ಲಪ್ಪ. ಸಿ. ಖೊದ್ನಾಪೂರ (ತಿಕೋಟಾ) ವಿಜಯಪುರ



# ಹೊಸ ಚಿಗುರು ಹಳೆ ಬೇರು ಕೂಡಿದರೆ ಮರ ಸೊಗಸು

## ನಾವು - ನಮ್ಮವರು

(ಮಕ್ಕಳ ಪ್ರಗತಿಯಲ್ಲಿ ಪಾಲಕರ ಪಾತ್ರ ಕುರಿತು ಲೇಖನ ಮಾಲಿಕೆ)

■ ಉದಯರಶ್ಮಿ ದಿನಪತ್ರಿಕೆ

ಯಾವುದೇ ಒಂದು ಸಸಿಯ ಚಿಗುರುವ ಭಾಗವನ್ನು ನಾವು ಕುಡಿ ಎಂದು ಕರೆಯುತ್ತೇವೆ. ಬೇರು ಸಸ್ಯಕ್ಕೆ ಮೂಲ ಆಧಾರವಾದರೆ ಕಾಂಡ ಎಲೆಗಳು ಅದರ ವಿಸ್ತರಿತ ಭಾಗವಾಗುತ್ತವೆ ಮತ್ತು ಕುಡಿ ಮುಂದಿನ ಭವಿಷ್ಯದಲ್ಲಿ ದೊಡ್ಡದಾಗುವ, ಹೆಮ್ಮರವಾಗುವ ಭಾಗವಾಗುತ್ತದೆ.

ಅಂತೆಯೇ ಕುಟುಂಬದಲ್ಲಿ ಹಿರಿಯರು ಮೂಲ ಬೇರಾದರೆ ಅವರ ಮಕ್ಕಳು ಕಾಂಡ ಎಲೆ ಮುಂತಾದ ಸಸ್ಯದ ಭಾಗಗಳಾಗುತ್ತಾರೆ ಮನೆಯ ಮಕ್ಕಳು ಆ ಮನೆಯ ಭವಿಷ್ಯದ ಕುಡಿಗಳಾಗುತ್ತಾರೆ. ಇಂತಹ ಮನೆಯ ಮಕ್ಕಳು ತಮ್ಮ ಎಲ್ಲಾ ಅಣ್ಣ, ತಮ್ಮ, ಅಕ್ಕ, ತಂಗಿಯರೊಂದಿಗೆ ಉತ್ತಮವಾದ ಒಡನಾಟವನ್ನು ಇಟ್ಟುಕೊಂಡು ಬಾಳುವಂತೆ ನಾವು ಮಕ್ಕಳನ್ನು ಬೆಳೆಸಬೇಕು.

ಮಕ್ಕಳಲ್ಲಿ ಅವರು ಹಾಗೆ ಇವರು ಹೀಗೆ ಎಂಬ ಪೂರ್ವಾಗ್ರಹಗಳನ್ನು ಬೆಳೆಸದೇ ಎಲ್ಲರೊಂದಿಗೆ ಪ್ರೀತಿ, ವಿಶ್ವಾಸ, ಸಹೃದಯತೆಯಿಂದ ಬದುಕುವಂತಹ ತಾಳ್ಮೆಯ ಸ್ವಭಾವವನ್ನು ನಿಧಾನವಾಗಿ ರೂಢಿಸಬೇಕು.

ಒಂದೇ ಕುಟುಂಬದ ಎರಡನೇ ತಲೆಮಾರಿನ ಮಕ್ಕಳು ಮತ್ತು ಮೊಮ್ಮಕ್ಕಳಲ್ಲಿಯೂ ಕೂಡ ತಮ್ಮ ಹಿರಿಯರಲ್ಲಿ ಇದ್ದಂತಹ ಅನ್ಯೋನ್ಯತಾ ಭಾವ, ಪ್ರೀತಿ ವಿಶ್ವಾಸ ಇರಲಿ... ಹಾಗೆ ಇರುವಂತೆ ಮಕ್ಕಳನ್ನು ಬೆಳೆಸಬೇಕು. ಕೂಡಿಸಿ ಎಂಬುದರ ಅರ್ಥ ಎರಡು ರೀತಿಯದ್ದು. ಮನೆಗೆ ಯಾರಾದರೂ ಬಂದಾಗ ಇಲ್ಲವೇ ಏನಾದರೂ





ಗಹನ ವಿಚಾರವನ್ನು ಚರ್ಚಿಸುವಾಗ ಕುಳಿತುಕೊಂಡು ನಿಧಾನವಾಗಿ ಮಾತನಾಡಿ ಒಂದು ತೀರ್ಮಾನಕ್ಕೆ ಬರೋಣ ಎಂಬ ಮಾತನ್ನು ನಾವು ಹಲವಾರು ಬಾರಿ ಕೇಳಿದ್ದೇವೆ.. ಕುಳಿತು ಮಾತನಾಡುವುದು ಎಂದರೆ ಅತ್ಯಂತ ಸಮಾಧಾನದಿಂದ ತಿಳಿ ಹೇಳುವುದು, ಮಾತನಾಡುವುದು, ವಿಚಾರ ವಿಮರ್ಶೆ ಮಾಡುವುದು ಚಿಂತನೆ ಮಾಡುವುದು ಎಂದರ್ಥ. ಇಲ್ಲಿ ನಿಧಾನವೇ ಪ್ರಧಾನವಾಗಿ ಇರಬೇಕಾಗುತ್ತದೆ.

ಸ್ವಿಚ್ ಹಾಕಿದೊಡನೆ ದೀಪ ಬೆಳಗಿದಂತೆ, ಆರ್ಡರ್ ಮಾಡಿದೊಡನೆ ಆಹಾರದ ಪೊಟ್ಟಣ ಮನೆಗೆ ತಲುಪುವಂತೆ ಸಂಬಂಧಗಳು ಯಾಂತ್ರಿಕವಾಗಿ ಇರುವುದಿಲ್ಲ. ಯಾವುದೇ ಒಂದು ವಿಚಾರವನ್ನು ಗ್ರಹಿಸಿ ಅದನ್ನು ಕಾರ್ಯರೂಪಕ್ಕೆ ತರಬೇಕಾದರೆ ನಮಗೆ ತುಸು ಕಾಲಾವಕಾಶ ಬೇಕೇ ಬೇಕು.

ಇನ್ನು ಮೂರನೆಯದಾಗಿ ಕೂಡಿ ಎಂದರೆ ನಮ್ಮ ದೈಹಿಕ ಮತ್ತು ವಯೋ ಸಹಜವಾಗಿ ಬೆಳೆಯುವುದರ ಜೊತೆ ಜೊತೆಗೆ ನಾವು ಮಾನಸಿಕವಾಗಿ ಯಾವ ರೀತಿ ಬೆಳೆಯುತ್ತಿದ್ದೇವೆ ಎಂಬುದರ ಅವಗಾಹನೆ ನಮಗೆ ಇರಬೇಕು. ಸಾಮಾಜಿಕವಾಗಿ ನಾವು ಅದೆಷ್ಟು ತಾಳ್ಮೆ ಶಾಂತಿ ಸಾಮರಸ್ಯದಿಂದ ಇದ್ದೇವೆ. ಕೌಟುಂಬಿಕವಾಗಿ ನಾವು ಅದೆಷ್ಟು ಪ್ರೀತಿ, ವಿಶ್ವಾಸ, ಸೌಹಾರ್ದತೆಯನ್ನು ಹೊಂದಿದ್ದೇವೆ ಎಂಬುದರ ಮೇಲೆ ನಮ್ಮ ಜೀವನದ ಬೆಳವಣಿಗೆ ನಿಂತಿದೆ.

ನೂರರ ಒಂದು ನೋಟು ಹರಿದು ಹೋದಾಗ ಅದಕ್ಕೆ ಹಿಂದೆ ಮುಂದೆ ಟಿಕ್ಸೋ ಪಟ್ಟಿಯನ್ನು ಅಂಟಿಸಿ ಹೆಚ್ಚಿನ ಭಾಗವನ್ನು ಕತ್ತರಿಸಿ ಸರಿಯಾಗಿ ಜೋಡಿಸಿ ಅದನ್ನು ಬ್ಯಾಂಕಿಗೆ ಒಯ್ದು ಕೊಟ್ಟಾಗ ಬ್ಯಾಂಕಿನವರು ಅದರಲ್ಲಿರುವ ಅಂಕಿ, ಸಂಖ್ಯೆಗಳು ಸರಿಯಾಗಿವೆಯೇ ಎಂಬುದನ್ನು ಪರಿಶೀಲಿಸಿ ನಮ್ಮಿಂದ ಆ ನೋಟನ್ನು ಪಡೆದುಕೊಂಡು ಅದೇ ಮೌಲ್ಯದ ಹೊಸ ನೋಟನ್ನು ನಮಗೆ ನೀಡುತ್ತಾರೆ. ಹರಿದ ನೋಟನ್ನು ನಾವು ಮತ್ತೆ ಮರುಬಳಕೆ ಮಾಡಬಹುದು ಆದರೆ ಅದು ಮೊದಲಿನ ರೀತಿ ಕಾಣಲು ಸಾಧ್ಯವಿಲ್ಲ.. ಹರಿದ ಕಲೆ ಹಾಗೆಯೇ ಉಳಿಯುತ್ತದೆ.ಅಲ್ಲವೇ.. ಅಂತೆಯೇ ಸಂಬಂಧಗಳು ಕೂಡ. ಇಲ್ಲಿಯೂ ಕೂಡ ಮನಸ್ಸುಗಳು ಬಿರುಕು ಬಿಟ್ಟಾಗ ಆ ಮನಸ್ಸುಗಳ ನಡುವಿನ ಮನಸ್ತಾಪ ಕಲೆಯಂತೆ ತೋರುತ್ತದೆ. ಆದ್ದರಿಂದ ಸಂಬಂಧಗಳನ್ನು ಚೆನ್ನಾಗಿ ಇಟ್ಟುಕೊಳ್ಳಬೇಕಾದದ್ದು ನಮ್ಮ ಕರ್ತವ್ಯ. ಮನೆಯ ಮಕ್ಕಳಲ್ಲಿ ಯಾವುದೇ ರೀತಿಯ ಭಿನ್ನಾಭಿಪ್ರಾಯಗಳಿಗೆ ಅವಕಾಶವಿರದಂತೆ ಪರಸ್ಪರ ಹೊಂದಾಣಿಕೆಯ ಬದುಕನ್ನು ಮಾಡಲೇಬೇಕು ಈ ರೀತಿ ಮಕ್ಕಳನ್ನು ಬೆಳೆಸುವುದು ಪಾಲಕರ ಮತ್ತು ಮನೆಯ ಹಿರಿಯರ ಕರ್ತವ್ಯ ಇದನ್ನೇ ಕೂಡಿ ಕೂಡಿಸಿ ಎಂದು ಹೇಳುವುದು.

ಕೆಲವೇ ದಶಕಗಳ ಹಿಂದೆ ಒಂದು ಮನೆಯ ನಾಲ್ಕೈದು ಜನ ಅಣ್ಣ ತಮ್ಮಂದಿರು ತಮ್ಮ ಪಾಲಕರು, ತಮ್ಮ ಪತ್ನಿಯರು ಮತ್ತು ಮಕ್ಕಳೊಂದಿಗೆ ಒಂದೇ ಸೂರಿನ ಅಡಿಯಲ್ಲಿ ಬಾಳುತ್ತಿದ್ದರು. ಯಾರು ಯಾರ ಮಕ್ಕಳು





ಎಂಬುದು ಬಂದ ಅತಿಥಿಗಳಿಗೆ ಗೊಂದಲವಾಗುವಷ್ಟು ಅನ್ಯೋನ್ಯತೆ ಅವರಲ್ಲಿ ಇರುತ್ತಿತ್ತು. ವಿರಸಗಳು, ಕಹಿ ಘಟನೆಗಳು ಇರುವುದಿಲ್ಲವೆಂದಿಲ್ಲ ಆದರೆ ಅದೆಲ್ಲವನ್ನು ಮೀರಿ ಒಟ್ಟಾಗಿ ಬಾಳಬೇಕೆಂಬ ಸದಾಶಯ ಅವರಲ್ಲಿ ಇರುತ್ತಿತ್ತು, ಆದರೆ ಇದೀಗ ಗಂಡ, ಹೆಂಡತಿ ಒಂದು ಇಲ್ಲವೇ ಎರಡು ಮಕ್ಕಳು ಮತ್ತು ಮನೆಯ ನಾಯಿಗಳು ಸೇರಿ ಒಂದು ಕುಟುಂಬವಾಗಿದೆ. ಮನೆ ಎಂದ ಮೇಲೆ ಭಿನ್ನಾಭಿಪ್ರಾಯಗಳು ಅತ್ಯಂತ ಸಹಜ. ವಿಭಿನ್ನ ವಿಚಾರಧಾರೆಗಳನ್ನು ಹೊಂದಿದ್ದರೂ ಸಮರಸದಿಂದ ಬಾಳುವುದು ಬಹಳ ಮುಖ್ಯವಾಗಿತ್ತು. ತಂದೆ ತಾಯಿಗಳು ಇರುವಾಗ ಸರಿ ಆದರೆ ಅವರಿಲ್ಲದ ಕಾಲಘಟ್ಟದಲ್ಲೂ ಮಕ್ಕಳು ಪರಸ್ಪರ ಒಬ್ಬ–ರಿಗೊಬ್ಬರು ಜೊತೆಯಾಗಿ ಕೂಡಿ ಬಾಳಬೇಕು. ಈ ನಿಟ್ಟಿನಲ್ಲಿ ಪಾಲಕರು ತಮ್ಮ ಮಕ್ಕಳನ್ನು ಕೂಡಿ ಕೂಡಿಸಬೇಕು ಎಂಬುದನ್ನು ಅರಿತು ತಮ್ಮ ಮಕ್ಕಳ ಬಾಳಿನಲ್ಲಿ ಇದೇ ಅರಿವನ್ನು ಮೂಡಿಸಿ ಬೆಳೆಸಿದರೆ ಸಾಕು.

ಲೇಖನ
– ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ
ಗದಗ ಜಿಲ್ಲೆ



## ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ನಾರಿಶಕ್ತಿ ವಿಧೇಯಕ ಕುರಿತು ವಿಚಾರ ಸಂಕಿರಣ

■ ಉದಯರಶ್ಮಿ ದಿನಪತ್ರಿಕೆ



ಕಲಬುರ್ಗಿ: ಜಿಲ್ಲೆಯ ಆಳಂದ ತಾಲ್ಲೂಕಿನ ಕಡಗಂಚಿ ಬಳಿ ಇರುವ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ನಾರಿ ಶಕ್ತಿ ವಂದನ ಅಧಿನಿಯಮ, 2023' ಕುರಿತಾಗಿ "ಮಹಿಳೆಯರ ರಾಜಕೀಯ ಸಬಲೀಕರಣ ಕು–ರಿತು ವಿಚಾರ ವಿನಿಮಯ" ಎಂಬ ವಿಷಯದಡಿ ವಿಚಾರ ಸಂಕಿರಣ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿ,ಮಹಿಳೆಯರರಾಜ–ಕೀಯ ಪ್ರತಿನಿಧಿತ್ವ, ಸಬಲೀಕರಣ ಮತ್ತು ಅದರ ಅನುಷ್ಠಾನಕ್ಕೆ ಸಂಬಂಧಿಸಿದ ಸವಾಲುಗಳ ಕುರಿತು ಚರ್ಚಿಸಲಾಯಿತು. ಸಾಮಾಜಿಕ ಹಾಗೂ ಸಾಂಸ್ಕೃತಿ–ಕ ಅಡೆತಡೆಗಳು, ಸಂಸ್ಥಾತ್ಮಕ ಸವಾಲುಗಳು ಮತ್ತು ಬೆಂಬಲ ವ್ಯವಸ್ಥೆಗಳನ್ನು ಬಲಪಡಿಸುವ ಅಗತ್ಯತೆ ಕುರಿತು ವಿಚಾರ ವಿನಿಮಯ ನಡೆಯಿತು.

ವಿಚಾರ ಸಂಕಿರಣದಲ್ಲಿ ಸಂವಾದಾತ್ಮಕ ಚರ್ಚೆಗಳು, ವಿದ್ಯಾರ್ಥಿಗಳ ನೇತೃತ್ವದ ಅಭಿಪ್ರಾಯ ಹಂಚಿಕೆ ಮತ್ತು ತಕ್ಷಣದ ಪ್ರತಿಕ್ರಿಯೆಗಳ ಮೂಲಕ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಲಾಯಿತು. ಮಹಿಳೆಯರ ರಾಜಕೀಯ ಭಾಗವಹಿಸುವಿಕೆಯನ್ನು ಕೇವಲ ಪ್ರತಿನಿಧಿತ್ವಕ್ಕೆ ಸೀಮಿತಗೊಳಿಸದೇ, ಸ್ವತಃ ಅವರೇ ನಿರ್ಧಾರಕೈಗೊಳ್ಳುವ ಮಟ್ಟದ ಸಬಲೀಕರಣ ಅಗತ್ಯವಿದೆ ಎಂದು ಒಕ್ಕೊರಲ ಅಭಿಪ್ರಾಯ ವ್ಯಕ್ತವಾಯಿತು. ಇದೇ ವೇಳೆ ನಾರಿ ಶಕ್ತಿ ವಂದನಾ ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಾಮರ್ಥ್ಯ ವೃದ್ಧಿ, ಸಂಸ್ಥಾತ್ಮಕ ಬೆಂಬಲ ಹಾಗೂ ಸಾಮಾಜಿಕ ಮನೋಭಾವಗಳಲ್ಲಿ ಬದಲಾವಣೆ ಅಗತ್ಯವಿದೆ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳು ಒತ್ತಿ ಹೇಳಿದರು.

## ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಮೂಟ್ ಕೋರ್ಟ್ ಸ್ಪರ್ಧೆ

# ವಕೀಲ ವೃತ್ತಿಯಲ್ಲಿ ನಿಷ್ಠೆ ಅತ್ಯಂತ ಪ್ರಮುಖ: ನ್ಯಾಯಮೂರ್ತಿ ಇನವಳ್ಳಿ

■ ಉದಯರಶ್ಮಿ ದಿನಪತ್ರಿಕೆ

ಕಲಬುರ್ಗಿ: ವಕೀಲ ವೃತ್ತಿಯಲ್ಲಿ ನಿಷ್ಠೆ ಅತ್ಯಂತ ಪ್ರಮುಖವಾಗಿದೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಟಿ.ಎನ್. ಇನವಳ್ಳಿ ಅವರು ಹೇಳಿದರು.

ಜಿಲ್ಲೆಯ ಆಳಂದ್ ತಾಲ್ಲೂಕಿನ ಕಡಗಂಚಿ ಬಳಿ ಇರುವ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕಾನೂನು ವಿಭಾಗವು ಹಮ್ಮಿಕೊಂಡಿದ್ದ ರಾಷ್ಟ್ರೀಯ ಮೂಟ್ ಕೋರ್ಟ್ ಸ್ಪರ್ಧೆ – 2026ರ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ನಿಷ್ಠೆಗೆ ಇನ್ನೊಂದು ಹೆಸರೇ ನ್ಯಾಯವಾದಿಗಳು ಎಂದರು.



ಗೌರವ ಅತಿಥಿಗಳಾದ ನಿವೃತ್ತ ನ್ಯಾಯಮೂರ್ತಿ ಪಿ. ಕೃಷ್ಣಭಟ್ ಅವರು ಮಾತನಾಡಿ, ವಕೀಲ ಮತ್ತು ಅಡ್ವೊಕೇಟ್ ನಡುವಿನ ವ್ಯತ್ಯಾಸವನ್ನು ವಿವರಿಸಿ, ಪ್ರಕರಣದ ವಾಸ್ತವಾಂಶಗಳು, ಕಾನೂನು ಮತ್ತು ನ್ಯಾಯಾಧೀಶರ ಮನೋಭಾವವನ್ನು ಅರ್ಥಮಾಡಿಕೊಳ್ಳುವ ಮಹತ್ವ ಕುರಿತು ಹೇಳಿದರು. ಗೌರವ ಅತಿಥಿಗಳಾಗಿ ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಕಡ್ಲೂರು ಸತ್ಯನಾರಾಯಣಾಚಾರ್ಯ ಅವರು ಆಗಮಿಸಿದ್ದರು.

ದೇಶದ ವಿವಿಧ ಭಾಗಗಳಿಂದ ಆಯ್ಕೆಯಾದ 14 ತಂಡಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಿದ್ದವು. ಪ್ರಾಥಮಿಕ ಹಾಗೂ ಕ್ವಾರ್ಟರ್ ಫೈನಲ್ ಹಂತಗಳನ್ನು ಆನ್ಲೈನ್ ಮೂಲಕ ನಡೆಸಲಾಗಿದ್ದು, ಸೆಮಿಫೈನಲ್ ಮತ್ತು ಫೈನಲ್ ಹಂತಗಳು ವಿಶ್ವವಿದ್ಯಾಲಯದ ಮೂಟ್ ಕೋರ್ಟ್ ಹಾಲ್‌ನಲ್ಲಿ ನಡೆಯಿತು. ಸೆಮಿಫೈನಲ್ ಹಂತದಲ್ಲಿ ನಾಲ್ಕು ತಂಡಗಳು ನಾ????ಟ್ ಆಧಾರದಲ್ಲಿ ಸ್ಪರ್ಧಿಸಿವೆ.ಅಂತಿಮ ಸುತ್ತಿಗೆ ನ್ಯಾಯಮೂರ್ತಿಗಳಾಗಿ ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಟಿ. ಎನ್. ಇನವಳ್ಳಿ, ನಿವೃತ್ತ ನ್ಯಾಯಮೂರ್ತಿ ಪಿ. ಕೃಷ್ಣ ಭಟ್ ಹಾಗೂ ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕಡ್ಲೂರು ಸತ್ಯನಾರಾಯಣಾಚಾರ್ಯ ಅವರು ಕಾರ್ಯನಿರ್ವಹಿಸಿದರು. ಕಾನೂನು ವಿಭಾಗದ ಮುಖ್ಯಸ್ಥ ಡಾ. ಅನಂತ ಡಿ. ಚಿಂಚೂರೇ ಅವರು ಸ್ವಾಗತಿಸಿದರು.

ಈ ಸ್ಪರ್ಧೆಯಲ್ಲಿ ಪಿಇಎಸ್ ವಿಶ್ವವಿದ್ಯಾಲಯದ ಕಾನೂನು ಕಾಲೇಜು ಪ್ರಥಮ ಬಹುಮಾನ (30,000ರೂ. ಗಳು ಮತ್ತು ಟ್ರೋಫಿ) ಪಡೆದುಕೊಂಡಿದ್ದು, ಹೈದ್ರಾಬಾದ್‌ನ ಐಸಿಎಫ್ಎಐ ಲಾ ಕಾಲೇಜು ದ್ವಿತೀಯ ಬಹುಮಾನ (20,000ರೂ.ಗಳು ಮತ್ತು ಟ್ರೋಫಿ) ಪಡೆದಿದೆ. ಕಾರ್ಯಕ್ರಮದ ಯಶಸ್ಸಿಗೆ ವಿವಿ ಕುಲಪತಿಗಳಾದ ಪ್ರೊ. ಬಟ್ಟು ಸತ್ಯನಾರಾಯಣ, ಕುಲಸಚಿವ ಪ್ರೊ. ಆರ್. ಆರ್. ಬಿರಾದಾರ್ ಹಾಗೂ ಕಾನೂನು ಅಧ್ಯಯನದ ಡೀನ್ ಪ್ರೊ. ಬಸವರಾಜ್ ಎಂ. ಕುಬಕಡ್ಡಿ ಅವರು ಭಾಜನರಾದರು.

# ಐದು ಜಿಲ್ಲೆಗಳು ಹೊರತುಪಡಿಸಿ ಉಳಿದೆಡೆ ಮುಂಗಾರು ಕೊರತೆ ನಿರೀಕ್ಷೆ: ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಮುಖ್ಯಮಂತ್ರಿ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು,ಏ.16– ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲ ಜಿಲ್ಲೆಗಳಲ್ಲಿ ಮುಂಗಾರು ಕೊರತೆ ನಿರೀಕ್ಷಿಸಲಾಗಿದ್ದು, ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸೂಚಿಸಿದರು.

ವಿಧಾನಸೌಧ ಸಭಾಂಗಣದಲ್ಲಿ ಗುರುವಾರ ಜರುಗಿದ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿನ ಕುಡಿಯುವ ನೀರು ಪೂರೈಕೆ ಕುರಿತಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ವರ್ಷ ಮುಂಗಾರಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆಯಿದ್ದು, ಸೆಪ್ಟಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ ಎಂದರು.

ಕುಡಿಯುವ ನೀರಿಗೆ ತೊಂದರೆಯಾದರೆ ಆಯಾ ಜಿಲ್ಲಾಧಿಕಾರಿಗಳೇ ಇದಕ್ಕೆ ಹೊಣೆಯಾಗುತ್ತಾರೆ. ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚಿಸಿದರು.

ಈ ಬಾರಿ ಎಪ್ರಿಲ್–ಜೂನ್ ಅವಧಿಯಲ್ಲಿ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಬಿಸಿಗಾಳಿ ದಿನಗಳು ಕಂಡು ಬರುವ ಸಾಧ್ಯತೆಯಿದೆ. ಇಂತಹ ಸಂದರ್ಭದಲ್ಲಿ ಯಾವ ರೀತಿಯ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂಬ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಸೂಚನೆಗಳನ್ನು ನೀಡಬೇಕು ಎಂದು ಅವರು ಹೇಳಿದರು.

ಸಾರ್ವಜನಿಕರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಖಾತ್ರಿಪಡಿಸಲು ಯಾವುದೇ ಅನುದಾನದ ಕೊರತೆಯಿಲ್ಲ. ಜಿಲ್ಲಾಧಿಕಾರಿಗಳ ವರದಿ ಆಧಾರದಲ್ಲಿ ಅಗತ್ಯ ಅನುದಾನವನ್ನು ಒದಗಿಸಲು ಹಣಕಾಸು ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ 213 ತಾಲ್ಲೂಕುಗಳನ್ನು ಹಾಗೂ 2410 ಗ್ರಾಮ ಪಂಚಾಯತ್ಗಳನ್ನು ಗುರುತಿಸಲಾಗಿದೆ. ಪ್ರಸ್ತುತ 114 ತಾಲೂಕುಗಳ 598 ಗ್ರಾಮ ಪಂಚಾಯತ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಟ್ಯಾಂಕರ್ಗಳ ಮೂಲಕ 137 ಗ್ರಾಮಗಳಿಗೆ ಒಟ್ಟು 129 ಟ್ಯಾಂಕರ್ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 585 ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆಗೆ ಪಡೆಯಲಾಗಿದ್ದು, ಇದರ ಮೂಲಕ 515 ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿರುವ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದರು.



ಕಲಬುರ್ಗಿ ಜಿಲ್ಲೆಯ 147 ಗ್ರಾಮ ಪಂಚಾಯಿತಿ, ಬಾಗಲಕೋಟೆ 114, ಬೆಳಗಾವಿಯ 127, ಚಿಕ್ಕಮಗಳೂರಿನ 115, ಹಾವೇರಿಯ 138, ಮಂಡ್ಯ 130, ತುಮಕೂರಿನ 141 ಹಾಗೂ ಉತ್ತರಕನ್ನಡ ಜಿಲ್ಲೆಯ 125 ಗ್ರಾಮ ಪಂಚಾಯತ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಗುರುತಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಪ್ರಸ್ತುತ 27 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, 95 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಗುರುತಿಸಲಾಗಿದೆ. ಒಟ್ಟು 145 ವಾರ್ಡ್‌ಗಳಿಗೆ 57 ಟ್ಯಾಂಕರ್‌ಗಳಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದ್ದು, ಬಾಡಿಗೆಗೆ 22 ಕೊಳವೆ ಬಾವಿಗಳನ್ನು ಪಡೆಯಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಟ್ಯಾಂಕರ್ ನೀರು ಪೂರೈಕೆ ಮಾಡಬೇಕು. ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆ ಪಡೆಯುವುದಕ್ಕೆ ಆದ್ಯತೆ ನೀಡಬೇಕು. ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದಾಗಿದೆ ಎಂದು ಮುಖ್ಯಮಂತ್ರಿಗಳು ಗುರುತಿಸಿದರು.

ರಾಜ್ಯದ ಪ್ರಮುಖ 14 ಜಲಾಶಯಗಳಲ್ಲಿ ಪ್ರಸ್ತುತ 321.93 ಟಿ.ಎಂ.ಸಿ ನೀರು ಲಭ್ಯವಿದ್ದು, ಇದು ಒಟ್ಟು ಸಾಮರ್ಥ್ಯದ ಶೇ.36ರಷ್ಟಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 330.35 ಟಿ.ಎಂ.ಸಿ ನೀರು ಲಭ್ಯವಿತ್ತು. ಪ್ರಸುತ ಕುಡಿಯುವ ನೀರಿಗೆ ಸಾಕಷ್ಟು ನೀರು ಜಲಾಶಯಗಳಲ್ಲಿ ಲಭ್ಯವಿದೆ. ಮಳೆಗಾಲ ವಿಳಂಬವಾಗಿ ಆರಂಭವಾಗುವ ಸಾಧ್ಯತೆಯಿರುವುದ–ರಿಂದ ಜುಲೈ ಮಧ್ಯದವರೆಗೂ ಕುಡಿಯುವ ನೀರಿಗಾಗಿ ಜಲಾಶಯಗಳಲ್ಲಿ ನೀರಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು. ನೀರಾವ–ರಿಗಿಂತ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜಲಾಶಯಗಳಲ್ಲಿ ನೀರಿನ ಸೋರಿಕೆಯನ್ನು ಗುರುತಿಸಿ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

ಕುಡಿಯುವ ನೀರಿನ ಕುರಿತಾಗಿ ಸಾರ್ವಜನಿಕರ ಅಹವಾಲುಗಳಿಗೆ ತುರ್ತಾಗಿ ಸ್ಪಂದಿಸಬೇಕು. ಇದಕ್ಕಾಗಿ ತಾಲೂಕು ಹಾಗೂ ವಾರ್ಡ್‌ಮಟ್ಟದಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಬೇಕು. ಜಿಲ್ಲಾ ಮಟ್ಟದ ಕಾರ್ಯಪಡೆ ಸಕ್ರಿಯವಾಗಿ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು .ಎಲ್ಲ ಆರ್‌ಓ ಘಟಕಗಳು 24/7 ನಿರಂತರ ವಿದ್ಯುತ್ ಸರಬರಾಜಿನೊಂದಿಗೆ ಕಾರ್ಯ ನಿರ್ವಹಿಸುವುದನ್ನು ಖಾತ್ರಿಪಡಿಸಬೇಕು. ಆರ್ ಒ ಘಟಕಗಳ ತಕ್ಷಣದ ದುರಸ್ತಿ ಮತ್ತು ಕುಡಿಯುವ ನೀರಿನ ಪೂರೈಕೆಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ತಾಲೂಕು ಮಟ್ಟದಲ್ಲಿ ತಂಡಗಳನ್ನು ನಿಯೋಜಿಸಬೇಕು ಎಂದು ಸೂಚನೆ ನೀಡಿದರು.

ಮಧ್ಯಪ್ರಾಚ್ಯದಲ್ಲಿನ ಯುದ್ಧದ ಪರಿಸ್ಥಿತಿಯಿಂದಾಗಿ ಈ ಬಾರಿ ರಸಗೊಬ್ಬರ ಪೂರೈಕೆಯಲ್ಲಿ ಅಡಚಣೆ ಉಂಟಾಗುವ ಸಾಧ್ಯತೆಯಿದೆ. ವ್ಯಾಪಾರಿಗಳು ರಸಗೊಬ್ಬರವನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸಿ ದಾಸ್ತಾನು ಇರಿಸುವುದನ್ನು ತಪ್ಪಿಸಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಸೂಕ್ತ ಸಮಯದಲ್ಲಿ ರಸಗೊಬ್ಬರ ಲಭ್ಯತೆಯನ್ನು ಖಾತ್ರಿಪಡಿಸಲು ಕ್ರಮ ಕೈಗೊಳ್ಳಬೇಕು. ಯೂರಿಯಾ, ಡಿಎಪಿ ಸರಿಯಾಗಿ ವಿತರಣೆಯಾಗುವಂತೆ ನೋಡಿಕೊಳ್ಳಬೇಕು. ಬೇರೆ ರಾಜ್ಯಗಳಿಗೆ ರಸಗೊಬ್ಬರ ಸಾಗಾಟ ಮಾಡುವುದನ್ನು ನಿಯಂತ್ರಿಸಬೇಕು. ಇದಕ್ಕಾಗಿ ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆಯನ್ನು ಬಿಗಿಗೊಳಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು. ಕಳೆದ ಎರಡು ವರ್ಷಗಳಲ್ಲಿ ಉತ್ತಮ ಮಳೆಯಾಗಿರುವುದ–ರಿಂದ ಮೇವಿನ ಕೊರತೆ ಸಧ್ಯಕ್ಕೆ ಇರುವುದಿಲ್ಲ. ಆದರೆ ಈ ಕುರಿತು ನಿರ್ಲಕ್ಷ್ಯ ವಹಿಸದೆ ಮೇವಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು. ಎಲ್ಲ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಕುರಿತಾದ ಟಾಸ್ಕ್ ಫೋರ್ಸ್ ಸಭೆ ನಡೆಸಿ ವರದಿ ಸಲ್ಲಿಸಬೇಕು ಮುಖ್ಯಮಂತ್ರಿ ಅವರು ತಿಳಿಸಿದರು. ಕಲುಷಿತ ನೀರು ಪೂರೈಕೆಯಾಗಿ ಆರೋಗ್ಯ ಸಮಸ್ಯೆಯಾಗದಂತೆ ಎಲ್ಲಾ ಜಿಲ್ಲೆಗಳಲ್ಲಿ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಈ ಕುರಿತು ಈಗಾಗಲೇ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದ್ದು, ಯಾವುದೇ ಕಾರಣಕ್ಕೂ ಕಲುಷಿತ ನೀರಿನಿಂದ ಸಮಸ್ಯೆಯಾಗದಂತೆ ನೋಡಿಕೊಳ್ಳುವುದು ಜಿಲ್ಲಾಧಿಕಾರಿಗಳ ಜವಾಬ್ದಾರಿ ಎಂದು ಹೇಳಿದ ಅವರು, ಹಾವೇರಿ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಈಗಾಗಲೇ ಕಳೆದ ವರ್ಷಕ್ಕಿಂತ ಹೆಚ್ಚಿನ ಪ್ರಮಾಣದ ರಸಗೊಬ್ಬರ ಮಾರಾಟವಾಗಿದ್ದು, ಇದಕ್ಕೆ ಕಾರಣವೇನು? ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ, ಅರ್ಹ ರೈತ–ರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ–್ಯತೆ ನೀಡಬೇಕು. ಪಂಚಾಯಿತಿ ರಾಜ್ ಮತ್ತು ಇಂಧನ ಇಲಾಖೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ವಿದ್ಯುತ್ ಸಂಪರ್ಕ ಕಲ್ಪಿಸಲು ಠೇವಣಿಗಾಗಿ ಕಾಯಬಾರದು ಎಂದು ಅವರು ಹೇಳಿದರು.

